ಸಂಪಾದಕರು :
ಎಂ.ಎಸ್. ವಿಕಾಸ್

ಶನಿವಾರ, ಜೂನ್ 17, 2023
ದಾವಣಗೆರೆ, ಪುಟ : 6 ರೂ : 5
ಸಂಪುಟ : 50 ಸಂಚಿಕೆ : 34 RNI : 27369/75

# ಜನತಾ ವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

50 1974 2023

janathavani@mac.com
www.janathavani.com
08192 254736 91642 99999






ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರು ಶುಕ್ರವಾರ ಕುಟುಂಬ ವರ್ಗದವರೊಂದಿಗೆ ಹುಟ್ಟುಹಬ್ಬ ಆಚರಿಸಿಕೊಂಡರು.

## 93ಕ್ಕೆ ಕಾಲಿಟ್ಟ ಎಸ್ಸೆಸ್

ದಾವಣಗೆರೆ, ಜು. 16- ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಶಾಮನೂರು ಶಿವಶಂಕರಪ್ಪನವರು ಶುಕ್ರವಾರ 92 ವರ್ಷಗಳನ್ನು ಪೂರೈಸಿ 93ನೇ ವಸಂತಕ್ಕೆ ಕಾಲಿಟ್ಟರು.

ಗುರುವಾರ ರಾತ್ರಿಯಿಂದಲೇ ಮನೆಯಲ್ಲಿ ಅಕ್ಷರಶಃ ಹಬ್ಬದ ವಾತಾವರಣ. ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳೊಂದಿಗೆ ರಾತ್ರಿ ಕೇಕ್ ಕತ್ತರಿಸಿ ಹುಟ್ಟುಹಬ್ಬ ಆಚರಿಸಿಕೊಂಡರು.

ಇನ್ನು ಬೆಳಗಾಗುತ್ತಲೇ ರಾಜಕೀಯ ಮುಖಂಡರು, ಅಧಿಕಾರಿ ವರ್ಗ, ಅಭಿಮಾನಿಗಳು ಎಸ್ಸೆಸ್ ಅವರ ಮನೆಗೆ ದಾಂಗುಡಿ ಇಟ್ಟಿದ್ದರು. ಶುಕ್ರವಾರ ಬೆಳಿಗ್ಗೆ ಮತ್ತೊಮ್ಮೆ ಕುಟುಂಬ ವರ್ಗದವ ರೊಂದಿಗೆ ಕೇಕ್ ಕತ್ತರಿಸಿ ಎಸ್ಸೆಸ್ ಸಂಭ್ರಮಿಸಿದರು.

### ಅಭಿಮಾನಿಗಳಿಂದ ಶುಭಾಶಯಗಳ ಸುರಿಮಳೆ

### ನಿಮ್ಮ ಹಾರೈಕೆ, ಆಶೀರ್ವಾದ ಹೀಗೆಯೇ ಇರಲಿ ಎಂದ ಎಸ್ಸೆಸ್

93 ವರ್ಷವಾದರೂ ಬೆಳಿಗ್ಗೆಯಿಂದ ರಾತ್ರಿವರೆಗೆ ಹಲವು ಕಾರ್ಯಕ್ರಮಗಳಲ್ಲಿ ಯುವಕರನ್ನೂ ನಾಚಿಸುವಂತೆ ಲವಲವಿಕೆ ಯಿಂದಲೇ ಭಾಗವಹಿಸಿದರು. ಅಭಿಮಾನಿ ಗಳ ಶುಭಾಶಯಗಳಿಗೆ ಪ್ರೀತಿಯಿಂದಲೇ ಸ್ಪಂದಿಸಿ, ಧನ್ಯವಾದ ಹೇಳಿದರು. ಸೆಲ್ಫಿ ತೆಗೆಸಿಕೊಳ್ಳಲು ಮುಗಿ ಬಿದ್ದಿದ್ದ ಮಹಿಳಾಮಣಿಗಳು, ಯುವಕರೊಂದಿಗೂ ಸಹ ತಾಳ್ಮೆಯಿಂದಲೇ ಫೋಸ್ ಕೊಟ್ಟರು.

ಬೆಳಿಗ್ಗೆ ಎಸ್ಸೆಸ್ ಅವರ ನಿವಾಸಕ್ಕೆ ತೆರಳಿದ್ದ ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್, ವಿಧಾನ ಪರಿಷತ್ ಮಾಜಿ ಸದಸ್ಯ ಮೋಹನ್ ಕೊಂಡಜ್ಜಿ, ವೀರಶೈವ ಮುಖಂಡ ಭೀಮ ಸಮುದ್ರದ ಮಂಜುನಾಥ್ ಸೇರಿದಂತೆ ಅನೇಕರು ಶುಭಾಶಯ ಕೋರಿದರು.

ಜಿಲ್ಲಾಧಿಕಾರಿ ಶಿವಾನಂದ ಕಾಪಶಿ, ಉಪ ವಿಭಾಗಾಧಿಕಾರಿ ದುರ್ಗಶ್ರೀ, ಜಿಲ್ಲಾ ಪಂಚಾಯ್ತಿ ಸಿಇಒ ಸುರೇಶ್ ಇಟ್ನಾಳ್, ತಹಶೀಲ್ದಾರ್ ಅಶ್ವತ್ಥ್, ನಗರ ಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಎಸ್ಸೆಸ್ ಅವರ ನಿವಾಸಕ್ಕೆ ತೆರಳಿ ಶುಭ ಹಾರೈಸಿ ದರು. ದೊಡ್ಡ ಬೂದಿಹಾಳು ಗ್ರಾಮದಲ್ಲಿ ಪೌರ ಕಾರ್ಮಿಕರಿಗೆ (4ನೇ ಪುಟಕ್ಕೆ)

## ಎಲ್ಲಾ ಜಾತಿ, ಧರ್ಮದವರ ಕಷ್ಟಕ್ಕೂ ಸ್ಪಂದಿಸಿದ ವ್ಯಕ್ತಿ

**ಎಸ್ಸೆಸ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಈಶ್ವರ ಬಿ.ಖಂಡ್ರೆ**

ದಾವಣಗೆರೆ, ಜು. 16- ಹುಟ್ಟು-ಸಾವಿನ ಮಧ್ಯೆ ನಾವು ಮಾಡುವ ಸೇವೆ ಶಾಶ್ವತವಾಗುತ್ತದೆ. ಶಿವಶಂಕರಪ್ಪ ಅವರು ಸಮಾಜದಲ್ಲಿ ಶಾಶ್ವತವಾಗಿ ಉಳಿಯುವಂತಹ ಕೆಲಸ ಮಾಡಿದ್ದಾರೆ ಎಂದು ಅಖಿಲ ಭಾರತ ವೀರಶೈವ ಮಹಾಸಭಾದ ಪ್ರಧಾನ ಕಾರ್ಯದರ್ಶಿಗಳೂ, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರೂ ಆದ ಈಶ್ವರ ಬಿ.ಖಂಡ್ರೆ ಹೇಳಿದರು.

ನಗರದ ಎಸ್.ಎಸ್. ಮಾಲ್‌ನಲ್ಲಿ ಶಾಮನೂರು ಶಿವಶಂಕರಪ್ಪ ಅವರ 93ನೇ ವರ್ಷದ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಶುಭ ಹಾರೈಸಿ ಅವರು ಮಾತನಾಡಿದರು.

ಶಾಮನೂರು ಶಿವಶಂಕರಪ್ಪ ಅವರ ಬಗ್ಗೆ ಎಷ್ಟು ಹೇಳಿದರೂ ಸಾಲದು. ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ, ಔದ್ಯೋಗಿಕ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿರುವ ವ್ಯಕ್ತಿ ಎಂದರು.

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾಗಿ ಸಮಾಜಕ್ಕೆ ಸಂಕಷ್ಟ ಬಂದಾಗ ಸಮಾಜವನ್ನು ಒಗ್ಗೂಡಿಸಿ ಮುನ್ನಡೆಸುವ ಕೆಲಸ ಮಾಡಿದ್ದಾರೆ. ಸಾವಿರಾರು ಜನರಿಗೆ ಉದ್ಯೋಗ ನೀಡಿದ್ದಾರೆ. ಎಲ್ಲಾ ಜಾತಿ, ಧರ್ಮದವರನ್ನೂ ಸಮಾನತೆಯಿಂದ ಕಂಡು, ಅವರ ಕಷ್ಟಗಳಿಗೆ ಸ್ಪಂದಿಸಿದ್ದಾರೆ. ಕೊಡುಗೈ ದಾನಿಗಳಾಗಿರುವ ಅವರು ನಮ್ಮೆಲ್ಲರಿಗೂ ಆದರ್ಶ ವ್ಯಕ್ತಿಯಾಗಿದ್ದಾರೆ ಎಂದರು.

ಎಸ್ಸೆಸ್ ಅವರು ಮನಸ್ಸು ಮಾಡಿದ್ದರೆ ಮುಖ್ಯಮಂತ್ರಿಯೂ ಆಗಬಹುದಿತ್ತು. ಆದರೆ ಶಾಸಕರಾಗಿ ಸೇವಾ ಕಾರ್ಯಗಳಲ್ಲಿ (6ನೇ ಪುಟಕ್ಕೆ)

# ಅಕ್ಕಿ ಪೂರೈಕೆಗೆ ನಿರಾಕರಣೆ

**ಕೇಂದ್ರದ ವಿರುದ್ಧ ಬೀದಿಗಿಳಿದು ಹೋರಾಡಲು ಕಾಂಗ್ರೆಸ್ ನಿರ್ಧಾರ**

ಬೆಂಗಳೂರು, ಜೂ. 16 - ಬಡವರಿಗೆ ಅಕ್ಕಿ ಕೊಡಲು ನಿರಾಕರಿಸಿರುವ ಕೇಂದ್ರ ಸರ್ಕಾರದ ವಿರುದ್ಧ ಕಾಂಗ್ರೆಸ್ ಬೀದಿಗಿಳಿದು ಹೋರಾಟ ನಡೆಸಲು ತೀರ್ಮಾನಿಸಿದೆ.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇದೇ 20ರಂದು ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಪ್ರತಿಭಟನೆ ಮಾಡಿ ಜನರಲ್ಲಿ ಅರಿವು ಮೂಡಿಸುವುದಾಗಿ ಹೇಳಿದರು.

ಭಾರತೀಯ ಆಹಾರ ನಿಗಮ ಅಕ್ಕಿ ನೀಡಲು ನಿರಾಕರಿಸಿರುವುದು ಬಿಜೆಪಿಯ ದ್ವೇಷ ರಾಜಕಾರಣ ಹಾಗೂ ಬಡವರ ವಿರೋಧಿ ನೀತಿಗೆ ಸಾಕ್ಷಿ. ಕಾಂಗ್ರೆಸ್ ಸರ್ಕಾರವು ಅನ್ನಭಾಗ್ಯ ಯೋಜನೆಯಡಿ 10 ಕೆ.ಜಿ. ಅಕ್ಕಿ ನೀಡಲು ಬದ್ಧವಾಗಿದೆ. ನಮ್ಮ ಐದು ಗ್ಯಾರಂಟಿಗಳ ಜಾರಿ ಬಗ್ಗೆ ವಿರೋಧ ಪಕ್ಷದವರು ಅನೇಕ ಟೀಕೆ ಮಾಡುತ್ತಾ ಬಂದಿದ್ದಾರೆ ಎಂದರು.

ಸರ್ಕಾರ ಬಂದ ಮೊದಲ ದಿನವೇ ಮೊದಲ ಆದೇಶ ಹೊರಡಿಸಿ ನಮ್ಮ ಬದ್ಧತೆ ಪ್ರದರ್ಶಿಸಿದ್ದೇವೆ. ಎರಡನೇ ಸಂಪುಟ ಸಭೆಯಲ್ಲಿ ಈ ಯೋಜನೆ ಜಾರಿಗೆ ಸಮಯ ನಿರ್ಧರಿಸಿದ್ದೇವೆ. ವಿರೋಧ ಪಕ್ಷಗಳ ಟೀಕೆಗೆ ನಾವು ಉತ್ತರ ನೀಡುವುದಿಲ್ಲ. ಟೀಕೆ ಸಾಯುತ್ತದೆ, ಕೆಲಸ ಉಳಿಯುತ್ತದೆ ಎಂಬ ಮಾತನ್ನು ನಾವು ನಂಬಿದ್ದೇವೆ ಎಂದರು.

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಅವರು ಚುನಾವಣೆ ಪ್ರಚಾರದ ವೇಳೆ ಬಿಜೆಪಿ ಸೋತರೆ ಕೇಂದ್ರ ಅನುದಾನ ಸ್ಥಗಿತ ಎಂದು ಹೇಳಿದ್ದರು. ಈಗ ಕರ್ನಾಟಕ ರಾಜ್ಯಕ್ಕೆ ಅಕ್ಕಿ ಖರೀದಿಗೆ ಅವಕಾಶ ತಪ್ಪಿಸುವ ಮೂಲಕ ತಮ್ಮ ಮಾತು ಉಳಿಸಿಕೊಂಡಿದ್ದಾರೆ. ಒಕ್ಕೂಟ ವ್ಯವಸ್ಥೆಯಲ್ಲಿ ಕೆಲಸ ಮಾಡುವುದಾಗಿ ಪ್ರಧಾನ ಮಂತ್ರಿಗಳು ಹೇಳಿಕೆ ನೀಡಿದ್ದರು. ಆದರೆ ಬಿಜೆಪಿ ಅಧ್ಯಕ್ಷರು ಮತದಾರರನ್ನು ಬೆದರಿಸಿದ್ದರು. ರಾಜ್ಯದಲ್ಲಿ ಯಾರೂ ಹಸಿವಿನಿಂದ ಇರಬಾರದು ಎಂಬ ಉದ್ದೇಶದಿಂದ ಅನ್ನಭಾಗ್ಯ ಯೋಜನೆ ಮಾಡಿದ್ದು, ಮುಂದಿನ ತಿಂಗಳಿಂದ ಯೋಜನೆ ಜಾರಿಗೆ ತೀರ್ಮಾನ ಮಾಡಿದ್ದೆವು ಎಂದರು.

ಇದಕ್ಕಾಗಿ ಭಾರತೀಯ (3ನೇ ಪುಟಕ್ಕೆ)

### ಆನ್‌ಲೈನ್ ಮೂಲಕ ಗೃಹಲಕ್ಷ್ಮಿ ಅರ್ಜಿ

**ಗೃಹಲಕ್ಷ್ಮಿ ಯೋಜನೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಸೇವಾ ಸಿಂಧುವಿನಲ್ಲಿ ಪ್ರತಿನಿತ್ಯ 200ಕ್ಕಿಂತ ಹೆಚ್ಚು ಅರ್ಜಿ ಪಡೆಯಲು ಆಗುವುದಿಲ್ಲ. ಪ್ರತಿ ಪಂಚಾಯ್ತಿಯಲ್ಲಿ ಒಂದು ಗ್ರಾಮ ಒನ್ ಮಾತ್ರ ಇದೆ. ಈ ಪ್ರದೇಶದಲ್ಲಿ ಎರಡೂವರೆ ಸಾವಿರ ಕುಟುಂಬಗಳಿವೆ. ಹೀಗಾಗಿ ಅಲ್ಲಿ ಮಹಿಳೆಯರನ್ನು ಸರದಿ ಸಾಲಿನಲ್ಲಿ ನಿಲ್ಲಿಸಿ ಭ್ರಷ್ಟಾಚಾರಕ್ಕೆ ಅವಕಾಶ ನೀಡುವುದಿಲ್ಲ. ಅವರ ಅರ್ಜಿ ಅವರೇ ಹಾಕಲು ಅವಕಾಶ ಮಾಡಿ ಕೊಡಲಾಗುತ್ತದೆ. ಸ್ವಲ್ಪ ತಡವಾದರೂ ಈ ಪ್ರಕ್ರಿಯೆ ಪಾರದರ್ಶಕವಾಗಿ** (3ನೇ ಪುಟಕ್ಕೆ)

## ಜಿಎಸ್‌ಟಿ ವಂಚಕರ ವಿರುದ್ಧ ಕ್ರಮಕ್ಕೆ ಪೊಲೀಸರಿಗೆ ಅಧಿಕಾರ

ಬೆಂಗಳೂರು, ಜೂ.16- ಸರಕು ಮತ್ತು ಸೇವಾ ತೆರಿಗೆ (ಜಿಎಸ್ಟಿ) ವಂಚಕರ ವಿರುದ್ಧ ಪೊಲೀಸ್ ಕ್ರಮ ಕೈಗೊಳ್ಳಲು ಅನುಮತಿ ನೀಡಬೇಕು ಎಂದು ರಾಜ್ಯ ಸರ್ಕಾರ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

### ಕೇಂದ್ರಕ್ಕೆ ರಾಜ್ಯ ಸರ್ಕಾರದ ಒತ್ತಾಯ

ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ಜಿಎಸ್ಟಿ ಕಾಯ್ದೆ ಯಲ್ಲಿ ಕೆಲ ತಿದ್ದುಪಡಿಗಳನ್ನು ತರಲು ಕೇಂದ್ರ ಮುಂದಾಗಿದ್ದು, ಈ ಸಂಬಂಧ ರಾಜ್ಯಕ್ಕಿರುವ ಆತಂಕಗಳ ಕುರಿತು ಕೇ ೦ ದ್ರ ಕ್ಕೆ (3ನೇ ಪುಟಕ್ಕೆ)

## ತೆಲಂಗಾಣದಿಂದ ಬರಲಿದೆ ಅನ್ನಭಾಗ್ಯ ಯೋಜನೆ ಅಕ್ಕಿ

ಬೆಂಗಳೂರು, ಜೂ. 16 - ಅನ್ನಭಾಗ್ಯ ಯೋಜನೆಗೆ ಕೇಂದ್ರ ಸರ್ಕಾರ ಅಕ್ಕಿ ನೀಡಲು ನಿರಾಕರಿಸಿದ್ದರೂ ನೆರೆಯ ತೆಲಂಗಾಣವು ರಾಜ್ಯ ಸರ್ಕಾರದ ಕೈಹಿಡಿಯಲು ಮುಂದಾಗಿದೆ.

ಕೇಂದ್ರದ ಆಹಾರ ನಿಗಮದ ದರದಲ್ಲೇ ಅಂದರೆ ಪ್ರತಿ ಕೆ.ಜಿ.ಗೆ 34.60 ರೂ.ದರದಲ್ಲೇ ಕರ್ನಾಟಕಕ್ಕೆ ಅಗತ್ಯವಾಗಿರುವ ಅಕ್ಕಿ ಪೂರೈಸಲು ತೆಲಂಗಾಣ ಸರ್ಕಾರ ತೀರ್ಮಾನ ಕೈಗೊಂಡಿದೆ.

ರಾಜ್ಯ ಸರ್ಕಾರದ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಸಚಿವರು, ಈ ಸಂಬಂಧ ಚರ್ಚೆ ನಡೆಸಿದ ನಂತರ ಅಕ್ಕಿ ಪೂರೈಕೆಗೆ ಒಪ್ಪಂದ ಮಾಡಿಕೊಳ್ಳಲು ತೆಲಂಗಾಣ ನಿರ್ಧರಿಸಿದೆ ಎಂದು ಉನ್ನತ ಮೂಲಗಳು (3ನೇ ಪುಟಕ್ಕೆ)

# ಸ್ವಚ್ಛತೆ ಪೌರ ಕಾರ್ಮಿಕರದ್ದು, ಸೌಲಭ್ಯ ಪಾಲಿಕೆಯದ್ದು

**ಪೌರ ಕಾರ್ಮಿಕರ 381 ಮನೆಗಳ ಗೃಹ ಪ್ರವೇಶ ಸಮಾರಂಭದಲ್ಲಿ ಎಸ್ಸೆಸ್**



ದಾವಣಗೆರೆ, ಜೂ. 16 - ಸ್ವಚ್ಛ ಭಾರತ ಎಂಬ ಘೋಷಣೆಯ ರೀತಿಯಲ್ಲೇ ಸ್ವಚ್ಛ ದಾವಣಗೆರೆ ಮಾಡುವ ಜವಾಬ್ದಾರಿ ಪೌರ ಕಾರ್ಮಿಕರದ್ದಾಗಿದೆ. ಅದೇ ರೀತಿ ಪೌರ ಕಾರ್ಮಿಕರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ಹೊಣೆ ನಗರ ಪಾಲಿಕೆಯದ್ದು ಎಂದು ಶಾಸಕ ಶಾಮನೂರು ಶಿವಶಂಕರಪ್ಪ ಹೇಳಿದರು.

ಪಾಲಿಕೆ ವತಿಯಿಂದ ದೊಡ್ಡ ಬೂದಿಹಾಳು ರಸ್ತೆಯಲ್ಲಿ ನಿರ್ಮಿಸಲಾಗಿರುವ 381 ಮನೆಗಳ ಗೃಹ ಪ್ರವೇಶ ಹಾಗೂ ಸ್ವಾಧೀನ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪೌರ ಕಾರ್ಮಿಕರಿಗಾಗಿ 51 ಕೋಟಿ ರೂ. ವೆಚ್ಚದಲ್ಲಿ ಪಾಲಿಕೆ ಮನೆಗಳನ್ನು ನಿರ್ಮಿಸಿ ಕೊಟ್ಟಿದೆ. ಜೊತೆಗೆ ಕಾಂಕ್ರೀಟ್ ರಸ್ತೆ, ಕುಡಿಯುವ ನೀರು ಹಾಗೂ ವಿದ್ಯುತ್ ಮುಂತಾದ ಸೌಲಭ್ಯಗಳನ್ನೂ ಕಲ್ಪಿಸಿದೆ ಎಂದವರು ಹೇಳಿದರು.

ಇನ್ನೂ 10-20 ಪೌರ ಕಾರ್ಮಿಕರಿಗೆ ಮನೆಗಳು ದೊರೆತಿಲ್ಲ. ಪಾಲಿಕೆ ವತಿಯಿಂದ ಅವರಿಗೂ ಸಹ ಮನೆಗಳನ್ನು ಕಲ್ಪಿಸುವ ನಿರೀಕ್ಷೆ ಇದೆ ಎಂದವರು ತಿಳಿಸಿದರು.

ಮೊದಲು ನಗರದಲ್ಲಿ ಸ್ವಚ್ಛತಾ ಕಾಮಗಾರಿಗೆ ಸಮರ್ಪಕ ಸೌಲಭ್ಯಗಳಿರಲಿಲ್ಲ. ನಂತರದಲ್ಲಿ ಸ್ವಚ್ಛತಾ ಕೆಲಸಕ್ಕೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಈಗ ಪೌರ ಕಾರ್ಮಿಕರಿಗೆ ಶೂ, ರೈನ್‌ಕೋಟ್, ಸುರಕ್ಷತಾ ಜಾಕೆಟ್ ಇತ್ಯಾದಿಗಳನ್ನು ಕೊಡಲಾಗಿದೆ ಎಂದು ಎಸ್ಸೆಸ್ ತಿಳಿಸಿದರು.

ಪರಿಶಿಷ್ಟ ಜಾತಿ, ಪಂಗಡ, ಅಂಗವಿಲಕರು ಹಾಗೂ ಇತರೆ ಸಮುದಾಯದ 1 ಸಾವಿರ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಲಾಗುತ್ತಿದೆ. ಈ ಸೌಲಭ್ಯ ಬಳಸಿಕೊಂಡು ಮಹಿಳೆಯರು ಸ್ವಾವಲಂಬಿ ಆಗಬೇಕು ಎಂದು ಕರೆ ನೀಡಿದರು.

ಪೌರಾಡಳಿತ ಸಚಿವರಾಗಿದ್ದ ಬಸವಲಿಂಗಪ್ಪ ಅವರು ಮಲ ಹೊರುವ ಪದ್ಧತಿ ನಿವಾರಣೆಗೆ ಕ್ರಮಗಳನ್ನು ತೆಗೆದುಕೊಂಡಿದ್ದರು. ಇದು ಪೌರ ಕಾರ್ಮಿಕರು ಉತ್ತಮ ಜೀವನ ನಡೆಸಲು ನೆರವಾಗಿದೆ. ಅವರನ್ನು ಪೌರ ಕಾರ್ಮಿಕರು ಸ್ಮರಿಸಬೇಕು ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಜಿಲ್ಲಾಧಿಕಾರಿ ಶಿವಾನಂದ ಕಾಪಶಿ, ಹಿಂದಿನ ಹಾಗೂ ಈಗಿನ ಜನಪ್ರತಿನಿಧಿಗಳ ಪ್ರಯತ್ನ ದಿಂದಾಗಿ ಪೌರ ಕಾರ್ಮಿಕರಿಗೆ ವಸತಿ ಒದಗಿಸುವ ಯೋಜನೆ ಸಾಕಾರಗೊಂಡಿದೆ ಎಂದರು.

ಪ್ರಾ ಸ್ತಾ ವಿ ಕ ವಾ ಗಿ (3ನೇ ಪುಟಕ್ಕೆ)

### ಬಿಜೆಪಿಯವರು ತರಾತುರಿ ಉದ್ಘಾಟಿಸಿದ್ದರು : ಎಸ್ಸೆಸ್

ಕಾಂಗ್ರೆಸ್ ಸರ್ಕಾರ ಇದ್ದಾಗಲೇ ಪೌರ ಕಾರ್ಮಿಕರ ವಸತಿ ಯೋಜನೆಗೆ ಶಿಲಾನ್ಯಾಸ ನಾನೇ ಮಾಡಿದ್ದೆ. ಈಗ ನಾನೇ ಮನೆಗಳನ್ನು ಸ್ವಾಧೀನ ಕೊಡುವಾಗಲೂ ಕಾಂಗ್ರೆಸ್ ಸರ್ಕಾರವೇ ಇದೆ ಎಂದು ಶಾಸಕ ಶಾಮನೂರು ಶಿವಶಂಕರಪ್ಪ ಹೇಳಿದರು.

ಬಿಜೆಪಿ ಸರ್ಕಾರ ಇದ್ದಾಗ ತರಾತುರಿಯಲ್ಲಿ ಬೆಳಗಿನ ಜಾವ ಬಂದು ಉದ್ಘಾಟನೆ ಎಂದು ಹೇಳಿ ಹೋಗಿರುವುದು ನಿಮಗೆಲ್ಲ ಗೊತ್ತಿದೆ ಎಂದೂ ಅವರು ತಿಳಿಸಿದರು.



# 'ಗ್ಯಾರಂಟಿ' ಜಾರಿಗೆ ಕ್ರಮವಹಿಸಿ

## ಜಗಳೂರು: ಅಧಿಕಾರಿಗಳಿಗೆ ಶಾಸಕ ದೇವೇಂದ್ರಪ್ಪ ತಾಕೀತು



ಜಗಳೂರು, ಜೂ.16- ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ಸಮರ್ಪಕ ಜಾರಿಗೆ ಕ್ರಮವಹಿಸಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಅಧಿಕಾರಿಗಳಿಗೆ ತಾಕೀತು ಮಾಡಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಫಲಾನುಭವಿಗಳ ಅಗತ್ಯ ದಾಖಲೆಗಳ ವಿತರಣೆಯಲ್ಲಿ ವಿಳಂಬ ಮಾಡಬೇಡಿ ಎಂದು ಶಾಸಕರು ಹೇಳಿದರು.

ತಾಲ್ಲೂಕಿನ ಅಣಬೂರು, ಕ್ಯಾಸನೇಹಳ್ಳಿ, ಹನುಮಂತಾಪುರ, ಕೆಚ್ಚೇನಹಳ್ಳಿ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಮತದಾರರಿಗೆ ಕೃತಜ್ಞತೆ ಹಾಗೂ ಶಾಸಕರ ಅಭಿನಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ, ಕಾಂಗ್ರೆಸ್ ಪಕ್ಷದ ಮಹತ್ತರ ಕೊಡುಗೆಯಾಗಿ ರುವ ಮನರೇಗಳ ಯೋಜನೆಯಡಿ ಕಾಮ ಗಾರಿಗಳು ಸಮರ್ಪಕವಾಗಿ ಜಾರಿಗೊಂಡಿಲ್ಲ. ನಮ್ಮ 5 ವರ್ಷದ ಆಡಳಿತಾವಧಿಯಲ್ಲಿ ಕೂಲಿ ಕಾರ್ಮಿಕರಿಗೆ ವರದಾನವಾಗಿರುವ ಉದ್ಯೋಗ ಖಾತ್ರಿ ಕೆಲಸ ನೀಡುತ್ತೇವೆ. ಅಲ್ಲದೆ ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ ಯಂತೆ 5 ವರ್ಷಕ್ಕೆ 20 ಲಕ್ಷ ಸೂರು ಕಲ್ಪಿಸ ಲಾಗುವುದು. ಕ್ಷೇತ್ರದಲ್ಲಿಯೂ ಅರ್ಹ ಫಲಾನುಭವಿಗಳಿಗೆ ನೀಡಲಾಗುವುದು ಎಂದರು.

**ಅನಾಥ ನಿಧಿ ಸಂಗ್ರಹಕ್ಕೆ ಸಂಕಲ್ಪ:** ಕ್ಷೇತ್ರದಲ್ಲಿ ಅನಾಥ ನಿಧಿ ಸಂಗ್ರಹಣೆಗೆ ಸಂಕಲ್ಪಗೈದಿದ್ದು, ಶೀಘ್ರದಲ್ಲೇ ಸಮಾಲೋಚನೆ ನಡೆಸುವೆ. ನಾನು ಮೊದಲು 50000 ರೂ. ನಿಧಿಗೆ ಹಾಕುವೆ. ರಾಜಕೀಯೇತರವಾಗಿ ಸಂಗ್ರಹಣೆ ಮಾಡುವೆ. ನಂತರ ಬಡಜನರ ಚಿಕಿತ್ಸೆಗೆ, ಅನಾಥರಿಗೆ ಶಿಕ್ಷಣ, ಇತರೆ ಸೌಲಭ್ಯ ಕ್ಕಾಗಿ ಸಹಾಯ ಹಸ್ತ ಚಾಚಲಾಗುವುದು ಎಂದು ಶಾಸಕರು ತಿಳಿಸಿದರು.

**ಪಿಡಿಓಗಳಿಗೆ ಎಚ್ಚರಿಕೆ :** ಕೆಲಸ ಮಾಡುವ ಇಷ್ಟವಿಲ್ಲದಿದ್ದರೆ ಬೇರೆಡೆ ಹೋಗಿ ಎಂದು ಶಾಸಕರು ಪಿಡಿಒಗಳನ್ನು ತರಾಟೆಗೆ ತೆಗೆದುಕೊಂಡರು. ಫೋನ್ ರಿಸೀವ್ ಮಾಡೊಲ್ಲ, ಪಂಚಾಯಿತಿ ಕೇಂದ್ರ ಸ್ಥಾನದಲ್ಲಿರುವುದಿಲ್ಲ, ಫೋನ್ ಸ್ವಿಚ್ ಆಫ್ ಆಗಿದೆ ಎಂಬ ಮೂರು ತಪ್ಪುಗಳು ಹೆಚ್ಚಾಗಿವೆ ಎಂದ ಅವರು, ನಾನು ಅಭಿವೃದ್ದಿಪಡಿಸುವಲ್ಲಿ ನಿದ್ರೆಗೆ ಜಾರೊಲ್ಲ, ಅಧಿಕಾರಿಗಳಿಗೂ ಮಲಗಲು ಬಿಡೊಲ್ಲ ಎಂದು ಖಡಕ್ ಎಚ್ಚರಿಕೆ ನೀಡಿದರು.

**ಪರಿಹಾರ ವಿತರಣೆ:** ಪ್ರಕೃತಿ ವಿಕೋಪ ತುರ್ತು ನಿಧಿಯಿಂದ ಸಿಡಿಲಿಗೆ ಬಲಿಯಾಗಿರುವ ಅಣಬೂರು ಗ್ರಾಮದ ಕಾಟಲಿಂಗಪ್ಪ ಹಾಗೂ ರಾಜಪ್ಪ ಕುಟುಂಬಕ್ಕೆ ಶಾಸಕರು ತಲಾ 5 ಲಕ್ಷರೂ. ಪರಿಹಾರದ ಚೆಕ್ ಹಾಗೂ ವೈಯಕ್ತಿಕವಾಗಿ ತಲಾ 25 ಸಾವಿರ ರೂ ಪರಿಹಾರ ವಿತರಿಸಿ, ಸಾಂತ್ವನ ಹೇಳಿದರು.

ಕೆಪಿಸಿಸಿ ಎಸ್.ಟಿ ಘಟಕದ ರಾಜ್ಯಾಧ್ಯಕ್ಷ ಕೆ.ಪಿ. ಪಾಲಯ್ಯ ಮಾತನಾಡಿ, ಕಾಂಗ್ರೆಸ್ ಪಕ್ಷದ ಆಡಳಿತಾವಧಿಯಲ್ಲಿ ನಿರುದ್ಯೋಗ ಸಮಸ್ಯೆಗೆ ಜಾರಿಗೊಳಿಸಿದ್ದ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ ಅನುದಾನವನ್ನು ಕೇಂದ್ರದ ಬಿಜೆಪಿ ಆಡಳಿತ ಪಕ್ಷ ಕಡಿತಗೊಳಿಸಿ ಬಡ ಕೂಲಿ ಕಾರ್ಮಿಕರನ್ನು ಬೀದಿಗೆ ತಳ್ಳಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಷಂಷೀರ್ ಅಹಮ್ಮದ್, ಗ್ರಾ.ಪಂ ಅಧ್ಯಕ್ಷೆ ಕವಿತಾ, ಉಪಾಧ್ಯಕ್ಷೆ ಸಣ್ಣ ನಾಗಮ್ಮ, ವಿ ಎಸ್ ಎಸ್ ಎನ್ ಅಧ್ಯಕ್ಷ ಮಂಜುನಾಥ್ , ಮುಖಂಡರಾದ ಕಲ್ಲೇಶ್ ರಾಜ್ ಪಟೇಲ್, ಪಲ್ಲಾಗಟ್ಟೆ ಶೇಖರಪ್ಪ, ಸಿ.ತಿಪ್ಪೇಸ್ವಾಮಿ, ಕಾನನಕಟ್ಟೆ ಪ್ರಭು, ತಿಪ್ಪೇಸ್ವಾಮಿ, ಅಹಮ್ಮದ್ ಅಲಿ, ವಿಜಯ್ ಕೆಂಚೋಳ್ ಮುಂತಾದವರು ಇದ್ದರು.

# ಅರಸೀಕೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಸುರೇಶ್

ಹರಪನಹಳ್ಳಿ, ಜೂ.16-ತಾಲ್ಲೂಕಿನ ಅರಸಿಕೆರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಡಾ.ಎಂ.ಸುರೇಶ್ ಶುಕ್ರವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿ ಬಸಮ್ಮ ಬಡಿಗೇರ್ ಘೋಷಣೆ ಮಾಡಿದರು. ಅಧ್ಯಕ್ಷರಾಗಿ ಆಯ್ಕೆಯಾದ ಡಾ. ಎಂ. ಸುರೇಶ್ ಮಾತನಾಡಿ, ಮುಂದಿನ ದಿನಗಳಲ್ಲಿ ರೈತರಿಗೆ ಸರಿಯಾದ ಸಮಯಕ್ಕೆ ಡಿ.ಎ.ಪಿ, 20.20., ಯೂರಿಯಾ ಗೊಬ್ಬರ ಪೂರೈಸಲು ಮತ್ತು ರೈತರಿಗೆ ಸಾಲ ಸೌಲಭ್ಯ ಕೊಡಿಸಲು ನಮ್ಮ ಸಂಘದ ಎಲ್ಲಾ ಸದಸ್ಯರು ಮತ್ತು ಸಿಬ್ಬಂದಿ ವರ್ಗ ಶ್ರಮಿಸುತ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ವೆಂಕಟೇಶ್ ಶೆಟ್ಟಿ, ಎ.ಬಿ. ಬಸವನಗೌಡ, ವೈ.ಡಿ. ಅಣ್ಣಪ್ಪ, ಪ್ರಶಾಂತ್ ಪಾಟೀಲ್, ಮರಿಯಪ್ಪ, ಕಡಬಗೇರಿ ಬಸವನಗೌಡ, ಕಸವನಹಳ್ಳಿ ಮಂಜಪ್ಪ, ಹುಸೇನ್ ಸಾಬ್, ಹಾಲಪ್ಪ, ಎನ್. ಸಾವಿತ್ರಮ್ಮ, ಮಹಾದೇವಮ್ಮ, ಕಾರ್ಯದರ್ಶಿ ಎಂ.ಸೀನಪ್ಪ, ಶಮೀ, ಬಿ.ಕೃಷ್ಣ, ನಾಗರಾಜ್, ಮಧು ಹಾಜರಿದ್ದರು.



# ರಾಜನಹಳ್ಳಿ ಮಠದಲ್ಲಿ ಇಂದು ಕಾರ್ಯಾಗಾರ, ನಾಳೆ ಅಭಿನಂದನಾ ಸಮಾರಂಭ



ವಾಲ್ಮೀಕಿ - ನಾಯಕ ಸಮಾಜದ ಹತ್ತು ಹಲವು ಬೇಡಿಕೆಗಳಿಗೆ ಧ್ವನಿಯಾಗಬೇಕೆಂಬ ಹಿನ್ನೆಲೆಯಲ್ಲಿ ಸಮುದಾಯವನ್ನು ಪ್ರತೀ ಹಂತದಲ್ಲೂ ಜಾಗೃತಗೊಳಿಸುವ ನಿಟ್ಟಿನಲ್ಲಿ ಎರಡನೇ ಬಾರಿಗೆ ರಾಜನಹಳ್ಳಿ ವಾಲ್ಮೀಕಿ ಗುರುಪೀಠದಲ್ಲಿ ಇಂದು ಬೆಳಿಗ್ಗೆ 6 ರಿಂದ ಸಂಜೆ 6 ರವರೆಗೆ ಸಮಾಜದ ಬಂಧುಗಳಿಗಾಗಿ ವಿಶೇಷ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಾಗಾರದಲ್ಲಿ ಇಂದು ಬೆಳಿಗ್ಗೆ 6 ಕ್ಕೆ ಶ್ರೀಗಳ ಜೊತೆ ವಾಯು ವಿಹಾರ, 7 ಕ್ಕೆ ಯೋಗಾಭ್ಯಾಸ ಇರುತ್ತದೆ. ಉಪನ್ಯಾಸ ನೀಡಲಿದ್ದಾರೆ. 10-30 ಕ್ಕೆ ಕಾರ್ಯಾಗಾರ ಉದ್ಘಾಟನೆ ನಂತರ ಚಿತ್ರದುರ್ಗದ ಅಧ್ಯಾಪಕ ಡಾ. ಕರಿಯಪ್ಪ ಮಾಳಗಿ ಅವರು ಶ್ರೀಮಠ ನಡೆದು ಬಂದ ದಾರಿ ಕುರಿತು ಮಾತನಾಡಲಿದ್ದಾರೆ.

12 ರಿಂದ 1 ರವರೆಗೆ ವಾಣಿಜ್ಯ ತೆರಿಗೆ ಇಲಾಖೆಯ ಉಪ ಆಯುಕ್ತ ಎಸ್. ಹೆಚ್. ಮಂಜುನಾಥ್ ಅವರು ಪ್ರಸ್ತುತ ವಿದ್ಯಮಾನದಲ್ಲಿ ಸಂವಿಧಾನದ ಆಶಯಗಳ ಅವಶ್ಯಕತೆ ಹಾಗೂ ಸದ್ಬಳಕೆ ಬಗ್ಗೆ ಉಪನ್ಯಾಸ ನೀಡುವರು. ಮಧ್ಯಾಹ್ನ 2-30 ಕ್ಕೆ ನಿವೃತ್ತ ಅಧ್ಯಾಪಕ ಹಾಗೂ ಪ್ರಗತಿಪರ ಚಿಂತಕ ಡಾ. ಎ.ಬಿ. ರಾಮಚಂದ್ರಪ್ಪ ಅವರು ಶೋಷಿತರ ಧ್ವನಿಯಾಗಿ ಸಂಘಟನೆಗಳ ಪಾತ್ರ ಕುರಿತು ಮಾತನಾಡಲಿದ್ದಾರೆ.

ಸಂಜೆ 4 ಕ್ಕೆ ಕುವೆಂಪು ವಿವಿ ಪ್ರಾಧ್ಯಾಪಕ ಡಾ. ಪ್ರಶಾಂತ್ ನಾಯಕ ಅವರು ವಾಲ್ಮೀಕಿ ರಾಮಾಯಣ ಅರಿವು ಹಾಗೂ ಅಸ್ತಿತ್ವ ಕುರಿತು ಉಪನ್ಯಾಸ ನೀಡುವರು. ಸಂಜೆ 5-30 ಕ್ಕೆ 2023 ರ ವಾಲ್ಮೀಕಿ ಜಾತ್ರಾ ಸಮಿತಿ ಪದಾಧಿಕಾರಿಗಳಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ.

ನಾಳೆ ದಿನಾಂಕ 18 ರ ಭಾನುವಾರ ಬೆಳಿಗ್ಗೆ 10-30 ಕ್ಕೆ ನಿವೃತ್ತ ಡಿಸಿ ಬಿ. ಶಿವಪ್ಪ ಅವರು ಸಮುದಾಯದ ಮುಂದಿರುವ ಸವಾಲುಗಳು ಹಾಗೂ ಪರಿಹಾರಗಳು ಕುರಿತು ಮಾತನಾಡಲಿದ್ದಾರೆ. ನಂತರ ಮಧ್ಯಾಹ್ನ 12 ಕ್ಕೆ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಸಾನಿಧ್ಯದಲ್ಲಿ ಸಮಾಜದ ನೂತನ ಸಚಿವರಾದ ಸತೀಶ್ ಜಾರಕಿಹೊಳಿ, ಕೆ.ಎನ್. ರಾಜಣ್ಣ, ಬಿ. ನಾಗೇಂದ್ರ ಸೇರಿದಂತೆ ಇತರರು ಹಾಗೂ ಜಾತ್ರಾ ಸಮಿತಿ ವಿ ಎಸ್ ಎಸ್ ಪದಾಧಿಕಾರಿಗಳಿಗೆ ಸನ್ಮಾನ ಸಮಾರಂಭವನ್ನೂ ಏರ್ಪಡಿಸಲಾಗಿದೆ.

# 5 ವರ್ಷಗಳಲ್ಲಿ ಉರ್ದು ಸೇರಿದಂತೆ 25 ಶಾಲೆಗಳ ದತ್ತು ಸ್ವೀಕಾರ

### ರಾಣೇಬೆನ್ನೂರಿನ ಶಾಸಕ ಪ್ರಕಾಶ ಕೋಳಿವಾಡ



ರಾಣೇಬೆನ್ನೂರು, ಜೂ. 16 - ಐದು ವರ್ಷಗಳಲ್ಲಿ ಐದು ಉರ್ದು, ಐದು ಕನ್ನಡ ಮಾಧ್ಯಮ ಸೇರಿದಂತೆ ಒಟ್ಟು ಇಪ್ಪತ್ತೈದು ಸರ್ಕಾರಿ ಶಾಲೆಗಳನ್ನು ದತ್ತು ತೆಗೆದುಕೊಂಡು ಖಾಸಗಿ ಶಾಲೆಗಳಿಗಿಂತ ಸಕಲ ಸೌಲಭ್ಯಗಳನ್ನು ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಪ್ರಕಾಶ ಕೋಳಿವಾಡ ಹೇಳಿದರು.

ಅವರು ಇಲ್ಲಿನ ಉರ್ದು ಹೈಸ್ಕೂಲ್ ಬಳಿಯ ಶಾದಿಮಹಲ್‌ನಲ್ಲಿ ಎಲ್ಲಾ ಮುಸ್ಲಿಂ ಬಾಂಧವರ ಪರವಾಗಿ ಅಂಜುಮನ್ ಸಂಸ್ಥೆ ವತಿಯಿಂದ ನಡೆಸಿದ ಸನ್ಮಾನ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಪ್ರತಿ ವರ್ಷ ಒಂದು ಉರ್ದು ಸೇರಿದಂತೆ ಐದು ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಆಧುನಿಕ ತಂತ್ರಜ್ಞಾನದ ಮೂಲಕ ಭೋಧಿಸುವದು, ಗುಣ ಮಟ್ಟದ ಸಲಕರಣೆಗಳೊಂದಿಗೆ ಮೂಲಭೂತ ಸೌಕರ್ಯಗಳನ್ನ ಒದಗಿಸಿ, ಖಾಸಗಿ ಶಾಲೆಗಳಿಗಿಂತ ಗುಣಮಟ್ಟದ ಶಿಕ್ಷಣ ಒದಗಿಸುವ ಎಲ್ಲ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಶಾಸಕರು ವಿವರಿಸಿದರು.

ಖಾಸಗಿ ಶಾಲೆಗಳು ಕ್ಷೇತ್ರದಾದ್ಯಂತ ಗುಣಮಟ್ಟದ ಶಿಕ್ಷಣ ನೀಡುತ್ತಿವೆ. ಹಾಗಾಗಿ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕ್ಷೀಣಿಸುತ್ತಿದೆ. ಕಾರಣ ನಾವು ಸಹ ಗುಣಾತ್ಮಕವಾಗಿ ಶಾಲೆಗಳನ್ನ ಅಭಿವೃದ್ಧಿ ಪಡಿಸಿ ಶಾಲೆಗಳ ಗುಣಮಟ್ಟ ಹೆಚ್ಚಿಸಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸುವ ಪ್ರಯತ್ನ ಮಾಡುವುದಾಗಿ ಶಾಸಕ ಪ್ರಕಾಶ ಕೋಳಿವಾಡ ಹೇಳಿದರು.

ನಾಗಶಾಂತಿ ಶಿಕ್ಷಣ ಸಂಸ್ಥೆ ಪ್ರಾಚಾರ್ಯ ಬಿ.ಬಿ. ನಂದ್ಯಾಲ ಸೇರಿದಂತೆ ಅಂಜುಮನ್ ಸಂಸ್ಥೆಯ ಹಿಂದಿನ ಹಾಗೂ ಇಂದಿನ ಪದಾಧಿಕಾರಿಗಳು, ಸಮಾಜದ ಕಾಂಗ್ರೆಸ್ ಮುಖಂಡರು, ಕಾಂಗ್ರೆಸ್ ಅಭಿಮಾನಿಗಳು ಪಾಲ್ಗೊಂಡಿದ್ದರು.

**ಸ್ನೇಹಿತರ ನೆನಪು :** ಬಾಲ್ಯ ಸ್ನೇಹಿತರು ಏಳು ಗುಂಪುಗಳಾಗಿ ಕ್ಷೇತ್ರದಾದ್ಯಂತ ಪ್ರಚಾರ ಮಾಡಿ ಚುನಾವಣೆಯಲ್ಲಿ ನನ್ನ ಜಯಕ್ಕೆ ಶ್ರಮಿಸಿದರು. ನನ್ನ ಜಯಕ್ಕೆ ಹೆಚ್ಚುವರಿಯಾಗಿ ಬಂದ ಹತ್ತು ಸಾವಿರ ಅಂತರದ ಮತಗಳಲ್ಲಿ ಏಳು ಸಾವಿರ ಮತಗಳು ಏಳು ಗುಂಪುಗಳಾಗಿ ಶ್ರಮಿಸಿದ ನನ್ನ ಸ್ನೇಹಿತರ ಪರಿಶ್ರಮದ ಫಲ ಎಂದು ಶಾಸಕ ಪ್ರಕಾಶ ಕೋಳಿವಾಡ ಅವರು ಸ್ನೇಹಿತರು ನೀಡಿದ ಆತ್ಮೀಯ ಸತ್ಕಾರದಲ್ಲಿ ಪ್ರಸ್ತಾಪಿಸಿದರು.

# ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು

### ಜಗಳೂರಿನ ಸಭೆಯಲ್ಲಿ ಲೋಕಾಯುಕ್ತ ಎಸ್ಪಿ ಎಂ.ಎಸ್. ಕೌಲಾಪುರೆ ಸೂಚನೆ



ಜಗಳೂರು, ಜೂ.16- ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರನ್ನು ಅಲೆದಾಡಿಸದೆ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ ಎಂದು ಲೋಕಾಯುಕ್ತ ಎಸ್ಪಿ ಎಂ. ಎಸ್.ಕೌಲಾಪುರೆ ಸೂಚಿಸಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಸಾರ್ವಜನಿಕ ರಿಂದ ಅಹವಾಲು ಸ್ವೀಕರಿಸಿ ನಂತರ ನಡೆದ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರ ವಿವಿಧ ಪಿಂಚಣಿ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಹಾಗೂ ಸರ್ಕಾರದ ಯೋಜನೆಗಳನ್ನು ಸಕಾಲದಲ್ಲಿ ಸಾರ್ವಜನಿಕರಿಗೆ ತಲುಪಿಸಬೇಕು.

ಸಕಾಲದಲ್ಲಿ ಅರ್ಜಿಗಳ ಕಡತಗಳ ವಿಲೇವಾರಿ ಮಾಡಿ, ಸರ್ಕಾರದ ಸೌಲಭ್ಯಗಳನ್ನು ಮನೆ ಬಾಗಿಲಿಗೆ ತಲುಪಿಸಲು ಅಧಿಕಾರಿಗಳಿಗೆ ಸಲಹೆ ನೀಡಿದರು.

ಶಿಕ್ಷಣ ಇಲಾಖೆಯ ಅಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡಿ ಕೊಠಡಿಗಳ ದುರಸ್ತಿ, ಸುಸ್ಥಿತಿಗಳ ಬಗ್ಗೆ ಮತ್ತು ಬಿಸಿಯೂಟದ ಗುಣಾತ್ಮಕತೆಯನ್ನು ಪರಿಶೀಲಿಸಬೇಕು. ಸಿಡಿಪಿಓ ಇಲಾಖೆ ಅಂಗನವಾಡಿ ಮಕ್ಕಳಿಗೆ ಹಾಲಿನ ಪೌಡರ್ ಪಾಕೇಟ್‌ಗಳನ್ನು ತೆರೆದು ಎಷ್ಟು ದಿನಗಳವರೆಗೆ ಬಳಕೆ ಮಾಡಬಹುದು ಎಂಬುದನ್ನು ಚೆಕ್ ಮಾಡಲು ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

**ರಾಗಿ ಖರೀದಿ ಕೇಂದ್ರ ಸಮಸ್ಯೆ ಪರಿಹರಿಸಿ:** ಸರ್ಕಾರದ ಬೆಂಬಲ ಬೆಲೆಯಲ್ಲಿ ಖರೀದಿ ಕೇಂದ್ರದಲ್ಲಿ ರಾಗಿ ಖರೀದಿಸಿದ್ದ ರೈತರಿಗೆ ಬಿಲ್ ಪಾವತಿಸಲು ಕ್ರಮ ಕೈಗೊಳ್ಳಲು ತಹಶೀಲ್ದಾರ್ ಅವರಿಗೆ ತಿಳಿಸಿದರು.

ಪಟ್ಟಣದ ಮಹತ್ವಾಕಾಂಕ್ಷಿ ಹಲವು ವರ್ಷಗಳಿಂದ ಶಾಂತಿ ಸಾಗರದ ಕುಡಿಯುವ ನೀರಿನ ನಿರ್ವಹಣೆಯಲ್ಲಿ ವಿಫಲರಾಗಿದ್ದು, ಶೀಘ್ರದಲ್ಲಿ ಕ್ರಮ ಕೈಗೊಳ್ಳುವಂತೆ, ಅಲ್ಲದೆ ಪಟ್ಟಣದ ಆರ್‌ಓ ಘಟಕಗಳನ್ನು ದುರಸ್ತಿಗೊಳಿಸಲು ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗೆ ತಾಕೀತು ಮಾಡಿದರು.

ಅರಣ್ಯ ಇಲಾಖೆ ಅಧಿಕಾರಿಗಳು ಗೈರು ಸರಿಯಲ್ಲ ಇವರೂ ಸೇರಿದಂತೆ ವಿವಿಧ ಇಲಾಖೆಗಳ ಅನುಷ್ಠಾನ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು.ಅಧಿಕಾರಿಗಳು ವಿನಾಕಾರಣ ಉಡಾಫೆ ಉದಾಹರಣೆಗಳನ್ನು ನೀಡಬಾರದು ಎಂದು ಎಚ್ಚರಿಕೆ ನೀಡಿದರು.

ತಹಶೀಲ್ದಾರ್ ಸಂತೋಷ್ ಕುಮಾರ್, ತಾ.ಪಂ. ಇಓ ಚಂದ್ರಶೇಖರ್, ಡಿವೈಎಸ್‌ಪಿ ರಾಮಕೃಷ್ಣ, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಬಿ. ಮಹೇಶ್ವರಪ್ಪ ಸೇರಿದಂತೆ ಅಧಿಕಾರಿಗಳು ಇದ್ದರು.

# ಕಮೀಷನ್‌ಗಾಗಿ ಹೊರಗಿನಿಂದ ಅಕ್ಕಿ ಖರೀದಿ ರಾಜ್ಯದಲ್ಲೇ ಅಕ್ಕಿ ಖರೀದಿಸಲು ಒತ್ತಾಯ



ಬೆಂಗಳೂರು, ಜೂ. 16 - ಹೊರರಾಜ್ಯಗಳಿಂದ ಅಕ್ಕಿ ಖರೀದಿಸಲು ರಾಜ್ಯ ಸರ್ಕಾರ ಮುಂದಾದುದು ಹಾಸ್ಯಾಸ್ಪದ. ಜೊತೆ ಜೊತೆಗೆ ಕಮೀಷನ್ ಪಡೆಯುವ ಹುನ್ನಾರ ಇದೆ ಎಂಬುದು ಸ್ಪಷ್ಟ ಎಂದು ಶಾಸಕ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಪತ್ರಕರ್ತರೊಂದಿಗೆ ಮಾತನಾಡಿದ ಅವರು, ನಮ್ಮ ರಾಜ್ಯದಲ್ಲಿ ಅಕ್ಕಿ ದೊಡ್ಡ ಪ್ರಮಾಣದಲ್ಲಿ ಬೆಳೆಯುತ್ತಿದೆ. ಇಲ್ಲಿಂದಲೇ ಖರೀದಿ ಮಾಡಿದರೆ ರೈತರಿಗೆ ಅನುಕೂಲವಲ್ಲವೇ? ಛತ್ತೀಸ್‌ಗಢ, ತೆಲಂಗಾಣದಿಂದ ತರುವುದರ ಹಿಂದೆ ಕಮೀಷನ್ ಗಿಟ್ಟಿಸುವ ಹುನ್ನಾರ ಇದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷವು ತಾವು ಕೊಟ್ಟ ಭರವಸೆ, ಗ್ಯಾರಂಟಿ ಅನುಷ್ಠಾನ ಅಸಾಧ್ಯವಾದ ಸಂದರ್ಭದಲ್ಲಿ ಮತಾಂತರ ನಿಷೇಧ ಕಾಯ್ದೆ ಹಿಂತೆಗೆತ, ಎಪಿಎಂಸಿ ತಿದ್ದುಪಡಿ ಕಾಯ್ದೆ ಹಿಂದಕ್ಕೆ ಪಡೆಯುವುದು ಹಾಗೂ ಪಠ್ಯಪುಸ್ತಕ ಪರಿಷ್ಕರಣೆಯಂತಹ ನಿರ್ಧಾರಗಳನ್ನು ಮಾಡುತ್ತಿದೆ. ಈ ಮೂಲಕ ಜನರ ಗಮನ ಬೇರೆಡೆ ಸೆಳೆಯಲು ಮುಂದಾಗಿದೆ. ಅಲ್ಲದೆ, ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಲು ಹೊರಟಿದೆ ಎಂದು ಟೀಕಿಸಿದರು.

ಮತಾಂತರ ನಿಷೇಧ ಕಾಯ್ದೆ ಹಿಂತೆಗೆತ, ಎಪಿಎಂಸಿ ತಿದ್ದುಪಡಿ ಕಾಯ್ದೆ ಹಿಂದಕ್ಕೆ ಪಡೆಯಲು ಜನತೆ ನಿಮಗೆ ಮತ ಕೊಟ್ಟರೇ? ಎಂದ ಅವರು, ಕುಣಿಯಲು ಬರದವರು ನೆಲ ಡೊಂಕು ಎಂಬಂತಾಗಿದೆ ಕಾಂಗ್ರೆಸ್ ಪರಿಸ್ಥಿತಿ ಎಂದು ಆಕ್ಷೇಪಿಸಿದರು.

ಬಿಜೆಪಿ 66 ಶಾಸಕರೊಂದಿಗೆ ಬಲಿಷ್ಠ ವಿರೋಧ ಪಕ್ಷವಾಗಿದೆ. ನಿಮ್ಮ ಧೋರಣೆಯನ್ನು ಸಹಿಸಲಸಾಧ್ಯ. ನೀವು ಕೊಟ್ಟ ಭರವಸೆ ಈಡೇರಿಸಲೇಬೇಕು. ಇಲ್ಲವಾದರೆ ಜನರ ಕ್ಷಮೆ ಕೇಳಿ ಎಂದು ಆಗ್ರಹಿಸಿದರು. ನಿಮ್ಮ ವಿದ್ಯುತ್ ದರ ಏರಿಸುವ ಕ್ರಮದಿಂದ ಇರುವ ಕೈಗಾರಿಕೆಗಳು ಬೇರೆ ರಾಜ್ಯಕ್ಕೆ ಓಡಿ ಹೋಗುವ ಸಂದರ್ಭ ಸೃಷ್ಟಿ ಮಾಡುತ್ತಿದ್ದೀರಲ್ಲವೇ? ಎಂದು ಕೇಳಿದರು. ಭರವಸೆಗಳನ್ನು ಕಂಡೀಷನ್‌ಗಳಿಲ್ಲದೆ ಜಾರಿಗೊಳಿಸಿ ಎಂದು ಒತ್ತಾಯಿಸಿದರು.




## ಭಾವಪೂರ್ಣ ಶ್ರದ್ಧಾಂಜಲಿ

ನಮ್ಮ ಬ್ಯಾಂಕಿನ ನಿವೃತ್ತ ಸಹಾಯಕರಾದ

**ಶ್ರೀ ಎಸ್. ಲೋಚನಪ್ಪನವರು**

ದಿನಾಂಕ 15.06.2023ರಂದು ನಿಧನರಾಗಿದ್ದು, ಅವರಿಗೆ ನಮ್ಮ ಭಾವಪೂರ್ಣ ಶ್ರದ್ಧಾಂಜಲಿ. ಭಗವಂತನು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ. ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗಕ್ಕೆ ನೀಡಲಿ ಎಂದು ಪ್ರಾರ್ಥಿಸುತ್ತೇವೆ.

**ಶ್ರೀ ಕೋಗುಂಡಿ ಬಕ್ಕೇಶಪ್ಪ**, ಅಧ್ಯಕ್ಷರು **ಶ್ರೀ ಅಂದನೂರು ಮುಪ್ಪಣ್ಣ**, ಉಪಾಧ್ಯಕ್ಷರು

ನಿರ್ದೇಶಕರುಗಳು :

✦ ಶ್ರೀ ಬಿ.ಸಿ. ಉಮಾಪತಿ ✦ ಶ್ರೀ ಪಲ್ಲಾಗಟ್ಟಿ ಶಿವಾನಂದಪ್ಪ ✦ ಶ್ರೀ ಎಂ. ಚಂದ್ರಶೇಖರ್
✦ ಶ್ರೀ ಟಿ.ಎಸ್. ಜಯರುದ್ರೇಶ್, ವ್ಯವಸ್ಥಾಪನಾ ಮಂಡಳಿ ಅಧ್ಯಕ್ಷರು ✦ ಶ್ರೀ ದೇವರಮನೆ ಶಿವಕುಮಾರ್, ವ್ಯವಸ್ಥಾಪನಾ ಮಂಡಳಿ ಸದಸ್ಯರು
✦ ಶ್ರೀ ಅಜ್ಜಂಪುರ ಶೆಟ್ರು ವಿಜಯಕುಮಾರ್ ✦ ಶ್ರೀಮತಿ ಸುರೇಖಾ ಎಂ. ಚಿಗಟೇರಿ ✦ ಶ್ರೀ ಕಂಚಿಕೇರಿ ಮಹೇಶ್, ವ್ಯವಸ್ಥಾಪನಾ ಮಂಡಳಿ ಸದಸ್ಯರು
✦ ಶ್ರೀ ನಲ್ಲೂರು ಎಸ್. ರಾಘವೇಂದ್ರ ✦ ಶ್ರೀ ಇ.ಎಂ. ಮಂಜುನಾಥ ✦ ಶ್ರೀ ವಿ. ವಿಕ್ರಮ್ ✦ ಶ್ರೀಮತಿ ಎ.ಆರ್. ಅರ್ಚನ

ವೃತ್ತಿಪರ ನಿರ್ದೇಶಕರು : ವ್ಯವಸ್ಥಾಪನಾ ಮಂಡಳಿ ಸದಸ್ಯರು :

✦ ಶ್ರೀ ಮುಂಡಾಸ್ ವೀರೇಂದ್ರ (ಚಾರ್ಟರ್ಡ್ ಅಕೌಂಟೆಂಟ್) ✦ ಶ್ರೀ ಮಲ್ಲಿಕಾರ್ಜುನ ಕಣವಿ (ವಕೀಲರು) ✦ ಶ್ರೀ ಬೆಳಗಾವಿ ಬಸವರಾಜಪ್ಪ (ಚಾರ್ಟರ್ಡ್ ಅಕೌಂಟೆಂಟ್) ✦ ಶ್ರೀ ಜಂಬಗಿ ರಾಧೇಶ್ (ಆಡಿಟರ್) ✦ ಶ್ರೀ ಕೆ. ಕೊಟ್ರೇಶ್ (ಸಾಫ್ಟ್‌ವೇರ್ ಇಂಜಿನಿಯರ್)

**ಶ್ರೀ ಬಿ.ಎಸ್. ಮಲ್ಲೇಶ್**
ಪ್ರಧಾನ ವ್ಯವಸ್ಥಾಪಕರು

**ಶ್ರೀ ಆರ್.ಎ. ಪ್ರಸನ್ನ**
ಉಪ ಪ್ರಧಾನ ವ್ಯವಸ್ಥಾಪಕರು

ಬ್ಯಾಂಕಿನ ಸಿಬ್ಬಂದಿ ವರ್ಗದವರು ಮತ್ತು ಲಕ್ಷ್ಮಿ ಠೇವಣಿ ಸಂಗ್ರಹಕಾರರು ಹಾಗೂ ನಿವೃತ್ತ ಸಿಬ್ಬಂದಿಯವರು

**ದಿ ದಾವಣಗೆರೆ ಅರ್ಬನ್ ಕೋ-ಆಪರೇಟಿವ್ ಬ್ಯಾಂಕ್ ಲಿ.,**
ಪ್ರಧಾನ ಕಚೇರಿ : ಪೋಸ್ಟ್ ಬಾಕ್ಸ್ ನಂ. 217, ಪಿ.ಬಿ. ರಸ್ತೆ, ದಾವಣಗೆರೆ.


# 250 ಕೋಟಿ ರೂ. ಬೇಳೆ ರಫ್ತು

## ಸಿ.ಬಿ.ಐ.ನಿಂದ ಆರೋಪ ಪಟ್ಟಿ ದಾಖಲು

ನವದೆಹಲಿ, ಜೂ. 16 – ಬೇಳೆಗಳ ರಫ್ತಿನ ಮೇಲಿನ ನಿಷೇಧ ಉಲ್ಲಂಘಿಸಿ 250 ಕೋಟಿ ರೂ. ಮೌಲ್ಯದ ರಫ್ತು ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿ.ಬಿ.ಐ. ಆರೋಪ ಪಟ್ಟಿ ದಾಖಲಿಸಿದೆ. 17 ವರ್ಷಗಳ ಹಿಂದೆ 2006-07ರಲ್ಲಿ ಈ ಪ್ರಕರಣ ನಡೆದಿತ್ತು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂರು ದೇಶಗಳಿಂದ ಸಿ.ಬಿ.ಐ. ಮಾಹಿತಿ ಕೇಳಿತ್ತು. ಆದರೆ, ಸಮಯಕ್ಕೆ ಸರಿಯಾಗಿ ಮಾಹಿತಿ ಸಿಗದ ಕಾರಣ ಪ್ರಕರಣ ದಾಖಲಿಸುವುದು ವಿಳಂಬವಾಗಿತ್ತು. ನ್ಯೂಜಿಲ್ಯಾಂಡ್ ಇನ್ನೂ ಮಾಹಿತಿ ನೀಡಿಲ್ಲ. ಜೆಟ್ ಕಿಂಗ್ ಎಂಬ ಕಂಪನಿ, ಅದರ ಮಾಲೀಕರಾದ ಶ್ಯಾಮ್ ಸುಂದರ್ ಜೈನ್, ನರೇಶ್ ಕುಮಾರ್ ಜೈನ್ ಹಾಗೂ ಪ್ರಶಾಂತ್ ಸೇಠಿ ಎಂಬುವವರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ. ಬೆಲೆ ನಿಯಂತ್ರಣಕ್ಕಾಗಿ ಆಗಿನ ಸರ್ಕಾರ ಬೇಳೆ ರಫ್ತಿನ ಮೇಲೆ ನಿರ್ಬಂಧ ಹೇರಿತ್ತು. ಆದರೆ, ನಕಲಿ ದಾಖಲೆ ರೂಪಿಸಿ ಬೇಳೆ ರಫ್ತು ಮಾಡಲಾಗಿತ್ತು.

# ರಾಣೇಬೆನ್ನೂರಿನಲ್ಲಿ ಇಂದು ವಿದ್ಯುತ್ ಗ್ರಾಹಕರ ಸಭೆ

ರಾಣೇಬೆನ್ನೂರಿನ ಉಪ-ವಿಭಾಗ-1 ಕಛೇರಿಯಲ್ಲಿ ವಿದ್ಯುತ್ ಗ್ರಾಹಕರ ಸಂವಾದ ಸಭೆಯನ್ನು ಇಂದು ಮಧ್ಯಾಹ್ನ 3 ರಿಂದ 5.30 ರವರೆಗೆ ಆಯೋಜಿಸಿದ್ದು, ರಾಣೇಬೆನ್ನೂರು ನಗರ ಹಾಗೂ ಉಪ-ವಿಭಾಗ-1 ಕ್ಕೆ ಸಂಬಂಧಪಟ್ಟ ಗ್ರಾಮೀಣ ಭಾಗದ ಗ್ರಾಹಕರು ಸಭೆಯಲ್ಲಿ ಭಾಗವಹಿಸಿ, ವಿದ್ಯುತ್ ಬಗೆಗಿನ ತಮ್ಮ ಅಹವಾಲನ್ನು ಸಲ್ಲಿಸಬಹುದು.

# ಹರಿಹರ : ಸಮಯ ಪಾಲಿಸದ ಸಿಬ್ಬಂದಿಗೆ ಪೌರಾಯುಕ್ತರ ತರಾಟೆ



ಹರಿಹರ, ಜೂ. 16 - ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗದೆ, ಸಾರ್ವಜನಿಕರನ್ನು ಅಲೆದಾಡಿಸುವ ನಗರಸಭೆ ಸಿಬ್ಬಂದಿಗಳನ್ನು ಪೌರಾಯುಕ್ತ ಬಸವರಾಜ್ ಐಗೂರ್ ತೀವ್ರವಾಗಿ ತರಾಟೆ ತೆಗೆದುಕೊಂಡ ಘಟನೆ ನಡೆಯಿತು.

ಮಧ್ಯಾಹ್ನ 1.30ಕ್ಕೆ ಊಟಕ್ಕೆ ತೆರಳಿದ ಹಲವು ಸಿಬ್ಬಂದಿಗಳು 3 ಗಂಟೆ ಮೇಲಾದರೂ ಕಚೇರಿಗೆ ಬಂದಿರಲಿಲ್ಲ. ಮಧ್ಯಾಹ್ನ 3.30ಕ್ಕೆ ಕಂದಾಯ ಶಾಖೆಗೆ ಆಗಮಿಸಿದ ಬಸವರಾಜ್ ಕೇವಲ ಬೆರಳೆಣಿಕೆಯಷ್ಟು ಸಿಬ್ಬಂದಿಗಳ ಮಾತ್ರ ಕುಳಿತಿದ್ದು, ಉಳಿದಿದ್ದ ಖಾಲಿ ಕುರ್ಚಿಗಳನ್ನು ಕಂಡು ಆಕ್ರೋಶಗೊಂಡರು.

ಜನರು ತಮ್ಮ ಕೆಲಸಕ್ಕೆಂದು ನಗರಸಭೆಯ ಮುಂದೆ ಕಾದು ಕುಳಿತುಕೊಂಡಿದ್ದಾರೆ. ಊಟಕ್ಕೆಂದು ತೆರಳಿರುವ ಇವರು ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜಾರಾಗದೆ ಜನರಿಗೆ ಸತಾಯಿಸುವುದರಿಂದ ಸಾರ್ವಜನಿಕರು, ಜನಪ್ರತಿನಿಧಿಗಳು ನನಗೆ ಉಗಿಯುತ್ತಾರೆ, ಕನಿಷ್ಟ ಸಮಯ ಪ್ರಜ್ಞೆ ಇಲ್ಲವೇ ಇವರಿಗೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಸಾರ್ವಜನಿಕನೊಬ್ಬ ತನ್ನ ಖಾತೆ ಬದಲಾವಣೆ ಫೈಲು ಕಳೆದ 18 ದಿನಗಳಿಂದ ಟೇಬಲ್‌ನಿಂದ ಟೇಬಲ್ಲಿಗೆ ಬದಲಾಗುತ್ತಿದೆ, ಆದರೆ ಏನೂ ಕೆಲಸವಾಗುತ್ತಿಲ್ಲ, ಸಿಬ್ಬಂದಿಗಳು ನನ್ನಿಂದ ಹಣ ಪಡೆದಿದ್ದರೂ ನನ್ನ ಕೆಲಸ ಮಾಡಿಕೊಡುತ್ತಿಲ್ಲ ಎಂದು ಪೌರಾಯುಕ್ತರ ಮುಂದೆ ಅಳಲನ್ನು ತೋಡಿಕೊಂಡರು.

ಪೌರಾಯುಕ್ತರು ಕಚೇರಿಗೆ ಬಂದು ತರಾಟೆ ತೆಗೆದುಕೊಳ್ಳುತ್ತಿರುವ ವಿಷಯ ತಿಳಿದ ಸಿಬ್ಬಂದಿಗಳು ತಕ್ಷಣ ಕಚೇರಿಗೆ ದೌಡಾಯಿಸಿದರು. ತಾವು ಸಮಯಕ್ಕೆ ಸರಿಯಾಗಿ ಏಕೆ ಹಾಜರಾಗಿಲ್ಲ ಎಂಬುದರ ಬಗ್ಗೆ ಲಿಖಿತವಾಗಿ ಕಾರಣ ಕೊಡಬೇಕು, ಇಲ್ಲವಾದಲ್ಲಿ ನೋಟಿಸ್ ನೀಡಿ ತಮ್ಮ ವಿರುದ್ಧ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿಗಳಿಗೂ ಹಾಗೂ ಪಿಡಿ ಅವರಿಗೆ ದೂರು ನೀಡಬೇಕಾಗುತ್ತದೆ ಎಂದು ಪೌರಾಯುಕ್ತರು ಎಚ್ಚರಿಸಿದರು.

KA/SK/CTA-275/2021-2023. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas

# ಸರ್ಕಾರದಿಂದ 5 ಕೋಟಿ ಸಸಿ ನೆಡಲು ಕ್ರಮ

## ಅರಣ್ಯವನ್ನು ಶೇ.31ಕ್ಕೆ ಹೆಚ್ಚಿಸಲು ಹಂತ ಹಂತವಾಗಿ ಕ್ರಮ: ಸಚಿವ ಈಶ್ವರ ಬಿ.ಖಂಡ್ರೆ

ದಾವಣಗೆರೆ, ಜೂ.16- ರಾಜ್ಯದಲ್ಲಿ ಶೇ. 21 ರಷ್ಟು ಮಾತ್ರ ಅರಣ್ಯ ಪ್ರದೇಶವಿದ್ದು ಮಾನದಂಡದಂತೆ ಶೇ.33 ರಷ್ಟು ಅರಣ್ಯ ಪ್ರದೇಶ ಇರಬೇಕಾಗಿದೆ. ಈ ಗುರಿಯನ್ನು ಹಂತ ಹಂತವಾಗಿ ಮುಟ್ಟಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ತಿಳಿಸಿದರು.



ಅವರು ಶುಕ್ರವಾರ ದಾವಣಗೆರೆಯ ಪ್ರಾದೇಶಿಕ ಅರಣ್ಯ ಇಲಾಖೆಯ ಬಳ್ಳಾರಿ ವೃತ್ತ ವ್ಯಾಪ್ತಿಯಲ್ಲಿ ಬರುವ ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ, ದಾವಣಗೆರೆ ಜಿಲ್ಲೆಗಳ ಅರಣ್ಯ ಸಂರಕ್ಷಣಾಧಿಕಾರಿಗಳು ಮತ್ತು ಪರಿಸರ ಅಧಿಕಾರಿಗಳ ಸಭೆಯಲ್ಲಿ ಪರಿಶೀಲನೆ ನಡೆಸಿ ಪತ್ರಕರ್ತರೊಂದಿಗೆ ಮಾತನಾಡಿದರು.

ಮಾನದಂಡದನ್ವಯ ಶೇ.33ರಷ್ಟು ಅರಣ್ಯ ಪ್ರದೇಶ ಇರಬೇಕಾಗಿದ್ದು ರಾಜ್ಯದಲ್ಲಿ ಶೇ.12 ರಷ್ಟು ಅರಣ್ಯ ಪ್ರದೇಶದ ಕೊರತೆ ಇದೆ. ಇದನ್ನು ಪ್ರತಿ ವರ್ಷ ಅರಣ್ಯವನ್ನು ಬೆಳೆಸುವುದರ ಮೂಲಕ ಗುರಿ ತಲುಪಲು ಉದ್ದೇಶಿಸಲಾಗಿದೆ. ಈ ನಿಟ್ಟಿನಲ್ಲಿ ಪ್ರಸಕ್ತ ವರ್ಷದಲ್ಲಿ 5 ಕೋಟಿ ಸಸಿಗಳನ್ನು ನೆಡುವ ಗುರಿ ಹೊಂದಿ ಮಳೆಗಾಲ ಆರಂಭವಾದ ತಕ್ಷಣ ಸಸಿಗಳನ್ನು ನೆಡಿಸಲು ಮತ್ತು ರೈತರಿಗೂ ಸಸಿಗಳನ್ನು ವಿತರಣೆ ಮಾಡಲು ಸಿದ್ದತೆ ಮಾಡಿಕೊಳ್ಳಲಾಗಿದೆ ಎಂದರು.

**ನಿಯಮಬದ್ದ ಗಣಿಗಾರಿಕೆ:** ಯಾವುದೇ ಗಣಿಗಾರಿಕೆಯನ್ನು ಕಾನೂನುಬಾಹಿರವಾಗಿ ಮಾಡಲು ಅವಕಾಶ ಇಲ್ಲ. ಆದರೆ ನಿಯಮ ಬದ್ದವಾದ ಗಣಿಗಾರಿಕೆಗೆ ಮಾತ್ರ ಅವಕಾಶ ನೀಡಲಾಗುತ್ತದೆ. ನಿಯಮ ಬಾಹಿರವಾಗಿ ಗಣಿಗಾರಿಕೆ ಮಾಡಲು ಅಧಿಕಾರಿಗಳು ಅವಕಾಶ ಮಾಡಿಕೊಟ್ಟಲ್ಲಿ ಅವರ ಮೇಲೆ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತದೆ ಎಂದರು.

**ಅರಣ್ಯ ಅಂಚಿನಲ್ಲಿರುವ ಜನವಸತಿ ತೆರವಿಲ್ಲ:** ಕಳೆದ ನಲವತ್ತು, ಐವತ್ತು ವರ್ಷಗಳಿಂದ ಅರಣ್ಯ ಅಂಚಿನಲ್ಲಿ ವಾಸಿಸುತ್ತಿರುವ ಜನವಸತಿ ಪ್ರದೇಶವನ್ನು ಒಕ್ಕಲೆಬ್ಬಿಸುವುದಿಲ್ಲ. ಮತ್ತು ಪಾರಂಪಾರಿಕವಾಗಿ ಉಳುಮೆ ಮಾಡುವವರನ್ನು ಒಕ್ಕಲೆಬ್ಬಿಸುವುದಿಲ್ಲ. ಕಂದಾಯ ಹಾಗೂ ಅರಣ್ಯ ಇಲಾಖೆಯಿಂದ ಜಂಟಿ ಸಮೀಕ್ಷೆ ನಡೆಸಿ ಕೇಂದ್ರಕ್ಕೆ ವರದಿ ಕಳುಹಿಸಲಾಗುತ್ತದೆ ಎಂದ ಅವರು ಗಣಿಗಾರಿಕೆ ಮತ್ತು ವಿಂಡ್ ಮಿಲ್‌ಗೆ ಅನುಮತಿ ಪಡೆದು ಒತ್ತುವರಿ ಮಾಡಿದಲ್ಲಿ ಅಂತಹ ಪ್ರದೇಶದ ತೆರವಿಗೆ ಕಾನೂನು ಕ್ರಮ ಜರುಗಿಸಲಾಗುತ್ತದೆ. ಯಾವುದೇ ಅರಣ್ಯ ಪ್ರದೇಶವನ್ನು ಒತ್ತುವರಿ ಮಾಡಿದಲ್ಲಿ ಅದನ್ನು ಜಿ.ಪಿ.ಎಸ್ ಮತ್ತು ಸ್ಯಾಟಲೈಟ್ ಮೂಲಕ ಪತ್ತೆಹಚ್ಚಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

### ಮಾಲಿನ್ಯ ತಡೆಗೆ ಕ್ರಮ

**ಕಾರ್ಖಾನೆಗಳು ಬಿಡುವ ಹೊಗೆ, ಧೂಳು, ಕೆರೆಗಳಿಗೆ ಬಿಡುವ ನೀರಿನಿಂದ ಜಲ ಮಾಲಿನ್ಯ, ವಾಯು ಮಾಲಿನ್ಯವಾಗುತ್ತಿದೆ. ಈ ನಿಟ್ಟಿನಲ್ಲಿ ಪರಿಸರ ಅಧಿಕಾರಿಗಳು ಅಂತಹ ಕಾರ್ಖಾನೆಗಳಿಗೆ ಭೇಟಿ ನೀಡಿ ಮಾಲಿನ್ಯ ತಡೆಗೆ ಕೈಗೊಂಡ ಕ್ರಮಗಳ ಪರಿಶೀಲನೆ ನಡೆಸಲಿದ್ದಾರೆ ಮತ್ತು ಮಾಲಿನ್ಯವನ್ನು ನಿಯಂತ್ರಿಸಲು ಬೇಕಾದ ಕಟ್ಟುನಿಟ್ಟಿನ ಕ್ರಮವನ್ನು ಇಲಾಖೆ ಮಾಡಲಿದೆ ಎಂದು ಸಚಿವ ಈಶ್ವರ ಬಿ.ಖಂಡ್ರೆ ಹೇಳಿದರು.**

**ಕಾಡು ಪ್ರಾಣಿಗಳಿಂದ ರಕ್ಷಣೆಗೆ ಕ್ರಮ:** ವನ್ಯಜೀವಿ ಸಂರಕ್ಷಣೆ ಮಾಡುವುದು ಇಲಾಖೆಯ ಹೊಣೆಗಾರಿಕೆಯಾಗಿದ್ದು ಇದೇ ವೇಳೆ ಕಾಡು ಪ್ರಾಣಿ ಗಳಿಂದ ಜನರಿಗಾಗುವ ತೊಂದರೆಗಳನ್ನು ತಪ್ಪಿಸಲು ಅಗತ್ಯವಿರುವ ಕಡೆ ರೇಲ್ ಬ್ಯಾರಿಕೇಡ್ ಅಥವಾ ಸೋಲಾರ್ ತಂತಿಬೇಲಿಯ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗುತ್ತದೆ. ಕಳೆದ ವರ್ಷ 52 ಜನರು ಆನೆ ತುಳಿತದಿಂದ ತಮ್ಮ ಪ್ರಾಣ ಕಳೆದುಕೊಂಡಿದ್ದು ಇತ್ತಿಚೇಗೆ ಚಾಮರಾಜನಗರದಲ್ಲಿ ಆನೆ ತುಳಿತದಿಂದ ಪ್ರಾಣ ಕಳೆದುಕೊಂಡ ಮೃತರ ಕುಟುಂಬಕ್ಕೆ ರೂ.15 ಲಕ್ಷ ಪರಿಹಾರದ ಚೆಕ್ ನೀಡಲಾಗಿದೆ.

ಈ ಹಿನ್ನೆಲೆಯಲ್ಲಿ ಆನೆಗಳಿಂದಾಗುವ ಸಮಸ್ಯೆಗಳ ಬಗ್ಗೆಯೂ ಗಮನಿಸಲಾಗಿದೆ ಎಂದರು.

ಅರಣ್ಯ ಇಲಾಖೆ ಬಳ್ಳಾರಿ ವೃತ್ತದ ನೋಡಲ್ ಅಧಿಕಾರಿ ಪ್ರಭಾಷ್ ಚಂದ್ರ ರೇ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯಲ್ಲಿ ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಬಳ್ಳಾರಿ ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಟಿ. ಹೀರಾಲಾಲ್, ದಾವಣಗೆರೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಜಗನ್ನಾಥ್ ಹಾಗೂ ಐದು ಜಿಲ್ಲೆಗಳ ಅರಣ್ಯ ಸಂರಕ್ಷಣಾಧಿಕಾರಿಗಳು, ಪರಿಸರ ಅಧಿಕಾರಿಗಳು ಉಪಸ್ಥಿತರಿದ್ದರು.

ಸಭೆಗೂ ಮೊದಲು ಸಚಿವರು ಕಚೇರಿಯ ಮುಂಭಾಗದಲ್ಲಿ ಸಸಿಯನ್ನು ನೆಟ್ಟು ಅರಣ್ಯ ಇಲಾಖೆ ಸಿಬ್ಬಂದಿಯವರಿಂದ ಗೌರವ ವಂದನೆ ಸ್ವೀಕರಿಸಿದರು. ಈ ವೇಳೆ ಜಿಲ್ಲಾಧಿಕಾರಿ ಶಿವಾನಂದ ಕಾಪಶಿ ಉಪಸ್ಥಿತರಿದ್ದರು.

# ಮನೆಗಳನ್ನು ತೆರವುಗೊಳಿಸದಂತೆ ಅಳತೆ ಮಾಡುವುದನ್ನು ತಡೆಯಲು ಆಗ್ರಹ



### ಹರಪನಹಳ್ಳಿಯ ಚಿಕ್ಕಮೇಗಳಗೇರಿ ಗ್ರಾಮಸ್ಥರಿಂದ ತಹಶೀಲ್ದಾರ್ ಬಿರಾದಾರ್ ಅವರಿಗೆ ಮನವಿ

ಹರಪನಹಳ್ಳಿ, ಜೂ.16- ಪರಿಶಿಷ್ಟ ಜಾತಿ, ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಬಡಜನರು ಮನೆಗಳನ್ನು ಕಟ್ಟಿಕೊಂಡಿರುವುದನ್ನು ತೆರವುಗೊಳಿಸ ದಂತೆ ಚಿಕ್ಕಮೇಗಳಗೇರಿ ಗ್ರಾಮಸ್ಥರು ಹಾಗೂ ಚುನಾಯಿತ ಪ್ರತಿನಿಧಿಗಳು ತಹಶೀಲ್ದಾರ್ ಶಿವಕುಮಾರ ಬಿರಾದಾರ ಇವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಾಲ್ಲೂಕು ಮಿನಿ ವಿಧಾನಸೌಧಕ್ಕೆ ಗ್ರಾಮಸ್ಥರು ಆಗಮಿಸಿ, ಹಿರೇಮೇಗಳಗೇರಿ ಗ್ರಾಮಕ್ಕೆ ಸೇರಿದ ಸ.ನಂ. 575 ಮತ್ತು 650ರಲ್ಲಿ 1.48 ಹಾಗೂ 1.68 ವಿಸ್ತೀರ್ಣವುಳ್ಳ ಜಮೀನಿನಲ್ಲಿ ಸರ್ಕಾರಿ ರಸ್ತೆ ಎಂದು ನಮೂದಾಗಿರುತ್ತದೆ. ಈ ಜಾಗದಲ್ಲಿ ಶೇ. 90ರಷ್ಟು ಬಡವರು ತಮ್ಮ ಮನೆಗಳನ್ನು ನಿರ್ಮಿಸಿಕೊಂಡು ಜೀವನ ನಡೆಸುತ್ತಿದ್ದಾರೆ. ಹತ್ತಿರದಲ್ಲಿ ಆಶ್ರಯ ಮನೆಗಳೂ ಇವೆ. ಇದೇ ಸ್ಥಳದಲ್ಲಿ ಸರ್ಕಾರವೇ ಸಿ.ಸಿ.ರಸ್ತೆ ಹಾಗೂ ವಿದ್ಯುತ್ ವ್ಯವಸ್ಥೆಯನ್ನು ಕಲ್ಪಿಸಿಕೊಟ್ಟಿದೆ ಹಾಗೂ ಗ್ರಾಮ ಪಂಚಾಯಿತಿಯಲ್ಲಿ ಡಿಮ್ಯಾಂಡಿಗೆ ಸೇರಿದ್ದು, ಮನೆ ಕಂದಾಯ ತೆರಿಗೆ ಪಾವತಿಸುತ್ತಾ ಬಂದಿದ್ದೇವೆ. ಆದರೆ, ಒಬ್ಬ ಜನಪ್ರತಿನಿಧಿಯಾದ ಓ.ನೀಲಪ್ಪ ಎನ್ನುವವರು ಉಪವಿಭಾಗಾಧಿಕಾರಿಗಳಿಗೆ ಹಾಗೂ ಲೋಕಾಯುಕ್ತರಿಗೆ ದೂರು ನೀಡಿದ್ದಾರೆ. ಈ ಪ್ರಕಾರ ಭೂಮಾಪಕರು ಅಳತೆ ಮಾಡಲು ಬಂದಾಗ ಗ್ರಾಮಸ್ಥರು ಅವರನ್ನು ತಡೆದು ನಮಗೆ ತೊಂದರೆಯಾಗುತ್ತದೆ ಎಂದು ತಿಳಿಸಿದ್ದಾರೆ.

ಬಡಜನರ ಹಿತದೃಷ್ಟಿಯಿಂದ ಸದರಿ ಜಮೀನಿನ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಅಲ್ಲಿನ ಜನರಿಗೆ ಯಾವುದೇ ತೊಂದರೆಯಾಗದಂತೆ ಕಾನೂನು ಕ್ರಮವಹಿಸಬೇಕು ಎಂದು ಗ್ರಾಮಸ್ಥರು ತಹಶೀಲ್ದಾರರಿಗೆ ಮನವಿಯಲ್ಲಿ ತಿಳಿಸಿದ್ದಾರೆ.

ಮನವಿ ಸ್ವೀಕರಿಸಿದ ತಹಶೀಲ್ದಾರ್ ಡಾ. ಶಿವಕುಮಾರ್ ಬಿರಾದಾರ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ. ಹಾಗಾಗಿ ಅಳತೆ ಮಾಡಿ, ವರದಿ ಕೊಡಲು ತಿಳಿಸಿದ್ದರು. ಆದರೆ, ಸದರಿ ಗ್ರಾಮಸ್ಥರು ಸ್ಥಳಕ್ಕೆ ಆಗಮಿಸಿ, ಪರಿಶೀಲನೆ ಮಾಡುವಂತೆ ಆಗ್ರಹಿಸಿ ಮನವಿ ನೀಡಿದ್ದಾರೆ. ಭೇಟಿ ನೀಡುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಎಂ.ಪರಶುರಾಮ, ಜೆ. ಚಂದ್ರಪ್ಪ, ಜೆ.ಮಂಜಪ್ಪ, ಕೆ.ಬಿ.ಮಂಜಪ್ಪ, ಎ. ಚನ್ನಬಸಪ್ಪ, ಎಸ್.ಬಿ.ರೇವಣಸಿದ್ದಪ್ಪ, ಮಾರುತಿ, ಕೆ. ಬಸವರಾಜ, ಓ.ಪರಶುರಾಮ, ಚಿಕ್ಕಮೇಗಳಗೇರಿ ಗ್ರಾಮಸ್ಥರು ಇದ್ದರು.

# ಅಕ್ಕಿ ಪೂರೈಕೆಗೆ ನಿರಾಕರಣೆ

**(1ನೇ ಪುಟದಿಂದ)** ಆಹಾರ ನಿಗಮಕ್ಕೆ ಅಕ್ಕಿ ಖರೀದಿಗೆ ಮನವಿ ಮಾಡಿದ್ದೆವು. ಪ್ರಾಧಿಕಾರ ಕೂಡ ಜೂನ್ 12 ರಂದು ಜುಲೈ ತಿಂಗಳಲ್ಲಿ ಇ ಹರಾಜು ಮೂಲಕ ಅಕ್ಕಿ ನೀಡುವುದಾಗಿ ಅನುಮತಿ ನೀಡಿತ್ತು. 2,08,425.750 ಮೆಟ್ರಿಕ್ ಟನ್ ಅಕ್ಕಿ ಖರೀದಿಗೆ ಅನುಮತಿ ನೀಡುವುದಾಗಿ ಪ್ರಾಧಿಕಾರ ಪತ್ರ ಬರೆದಿತ್ತು. ಇದಾದ ಮರುದಿನ ಅಂದರೆ ಜೂನ್ 13 ರಂದು, ಗೋಧಿ ಮತ್ತು ಅಕ್ಕಿಯನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರುವುದನ್ನು ತಡೆಯಲಾಗಿದೆ ಎಂದು ತಿಳಿಸಿದೆ.

ಬಿಜೆಪಿಯ ದ್ವೇಷದ ರಾಜಕಾರಣಕ್ಕೆ ಇದು ಸಾಕ್ಷಿ. ಕಾಂಗ್ರೆಸ್ ಪಕ್ಷಕ್ಕೆ ಜನ ಹಾಕಿರುವ ಮತಗಳಿಗೆ ಬಿಜೆಪಿಯ ಭ್ರಷ್ಟ ಸರ್ಕಾರ ಧಿಕ್ಕಾರ ಹಾಕಿದೆ. ಬಡವರಿಗೆ ದ್ರೋಹ ಮಾಡುತ್ತಿದೆ. ಬಡವರ ಹೊಟ್ಟೆ ಮೇಲೆ ಬರೆ ಎಳೆದಿದೆ. ಬಿಜೆಪಿ ಎಂದರೆ ಬಡವರಿಗೆ ದ್ರೋಹ ಬಗೆಯುವ ಪಕ್ಷವಾಗಿದೆ. ಕೇಂದ್ರದ ಈ ದ್ರೋಹ ಖಂಡಿಸಿ ಬರುವ ಮಂಗಳವಾರ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಪಕ್ಷದ ವತಿಯಿಂದ ಪ್ರತಿಭಟನೆ ಮಾಡಲಾಗುವುದು. ಈ ಪ್ರತಿಭಟನೆಯಲ್ಲಿ ಆಯಾ ಜಿಲ್ಲೆಯ ಶಾಸಕರು ಭಾಗವಹಿಸಬೇಕು ಎಂದರು.

ಕೇಂದ್ರ ಸರಕಾರ ನೀಡದಿದ್ದರೂ ನಾವು 10 ಕೆ.ಜಿ ಅಕ್ಕಿ ನೀಡುತ್ತೇವೆ. ಅನ್ನ ಭಾಗ್ಯ ಯೋಜನೆ ಜಾರಿ ಆಗಲಿದೆ. ಮುಖ್ಯಮಂತ್ರಿಗಳು, ಸಚಿವರು ಬೇರೆ ರಾಜ್ಯಗಳ ಜತೆ ಚರ್ಚೆ ಮಾಡುತ್ತಿದ್ದೇವೆ. ನಾವು ಮುಕ್ತ ಮಾರುಕಟ್ಟೆಯಲ್ಲಿ ಅಕ್ಕಿ ಖರೀದಿ ಮಾಡಲು ಸಾಧ್ಯವಿಲ್ಲ ಎಂದೇನಿಲ್ಲ. ಇದು ಒಕ್ಕೂಟ ವ್ಯವಸ್ಥೆ. ದೇಶದಲ್ಲಿ ಈಗಾಗಲೇ ಇರುವ ವ್ಯವಸ್ಥೆ ಹಾಗೂ ಪ್ರಕ್ರಿಯೆ ಮೂಲಕ ಅಕ್ಕಿ ಖರೀದಿಗೆ ಮನವಿ ಮಾಡಿದ್ದೆವು.

### ಆನ್‌ಲೈನ್ ಮೂಲಕ ಅರ್ಜಿ

**(1ನೇ ಪುಟದಿಂದ) ನಡೆಯಲಿದೆ ಎಂದವರು ತಿಳಿಸಿದರು. ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ ಮಾಡಲಾಗುವುದು. ಇದಕ್ಕಾಗಿ ಪ್ರತ್ಯೇಕ ಆಪ್ ನಿರ್ಮಾಣ ಮಾಡಬಹುದು. ಪ್ರತಿಯೊಬ್ಬರು ತಮ್ಮ ಅರ್ಜಿಯನ್ನು ಅವರದೇ ಸ್ಮಾರ್ಟ್ ಫೋನ್ ಮೂಲಕ ಸಲ್ಲಿಸಲು ಅವಕಾಶ ಮಾಡಿಕೊಡಲಾಗು ವುದು ಎಂದು ತಿಳಿಸಿದರು.**

ಪಾರದರ್ಶಕ ವ್ಯವಸ್ಥೆಯಲ್ಲಿ ಖರೀದಿಗೆ ನಾವು ಎಫ್‌ಸಿಐಗೆ ಕೇಳಿದ್ದೇವೆ. ಕೇಂದ್ರದ ಬಳಿ 7 ಲಕ್ಷ ಮೆಟ್ರಿಕ್ ಟನ್ ದಾಸ್ತಾನು ಇದೆ. ನಾವು ಕೇವಲ 2.85 ಲಕ್ಷ ಮೆಟ್ರಿಕ್ ಟನ್ ಖರೀದಿಗೆ ಕೇಳಿದ್ದೆವು. ದಾಸ್ತಾನು ಇದ್ದರೂ ಅಕ್ಕಿ ನೀಡಲು ನಿರಾಕರಿಸಿದ್ದಾರೆ. ಕೇಂದ್ರದ ಈ ಧೋರಣೆ ಪ್ರತಿಭಟಿಸಿ, ಜನರಿಗೆ ಅರಿವು ಮೂಡಿಸಿ, ಕೇಂದ್ರದ ಮೇಲೆ ಒತ್ತಡ ಹೇರಬೇಕಿದೆ.

ಎಫ್‌ಸಿಐ ನೀತಿ ಬದಲಾಗಿದ್ದು, ಈ ಬಗ್ಗೆ ನಮ್ಮ ಅಧಿಕಾರಿಗಳಿಗೆ ಗೊತ್ತಿಲ್ಲದೇ ಅನುಮತಿ ನೀಡಿ ಪತ್ರ ಬರೆದಿದ್ದಾರೆ ಎಂಬ ಎಫ್‌ಸಿಐ ಅಧಿಕಾರಿಗಳ ಸ್ಪಷ್ಟನೆ ಬಗ್ಗೆ ಕೇಳಿದಾಗ, ಅಲ್ಲಿಗೆ ಭಾರತ ಆಹಾರ ಪ್ರಾಧಿಕಾರಕ್ಕೆ ತಮ್ಮ ಅಧಿಕಾರಿಗಳ ಮೇಲೆ ನಿಯಂತ್ರಣವಿಲ್ಲ ಎಂಬುದು ಸ್ಪಷ್ಟವಾಗುತ್ತದೆಯಲ್ಲವೇ? ಎಂದರು.

# ಸ್ವಚ್ಛತೆ ಪೌರ ಕಾರ್ಮಿಕರದ್ದು, ಸೌಲಭ್ಯ ಪಾಲಿಕೆಯದ್ದು

**(1ನೇ ಪುಟದಿಂದ)** ಮಾತನಾಡಿದ ಪಾಲಿಕೆ ಆಯುಕ್ತೆ ರೇಣುಕ, ಪೌರ ಕಾರ್ಮಿಕರಿಗೆ ಬೆಳಗಿನ ಉಪಹಾರ ನೀಡಲು 62.17 ಲಕ್ಷ ರೂ.ಗಳನ್ನು ನಿಗದಿ ಪಡಿಸಲಾಗಿದೆ. 50 ಲಕ್ಷ ರೂ. ವೆಚ್ಚದಲ್ಲಿ 1,000 ಹೊಲಿಗೆ ಯಂತ್ರಗಳನ್ನು ವಿತರಿಸಲಾಗುತ್ತಿದೆ. 15 ಲಕ್ಷ ರೂ. ವೆಚ್ಚದಲ್ಲಿ ಸುರಕ್ಷಾ ಧಿರಿಸುಗಳನ್ನು ವಿತರಿಸಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಪೌರ ಕಾರ್ಮಿಕರಿಗೆ ಉಪಹಾರ ನೀಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಮಹಿಳಾ ಫಲಾನುಭವಿಗಳಿಗೆ 1 ಸಾವಿರ ಹೊಲಿಗೆ ಯಂತ್ರ ಹಾಗೂ ಪೌರ ಕಾರ್ಮಿಕರಿಗೆ ಸುರಕ್ಷಾ ದಿರಿಸುಗಳನ್ನು ವಿತರಿಸಲಾಯಿತು.

ಇದೇ ವೇಳೆ 93ನೇ ಜನ್ಮದಿನ ಆಚರಿಸಿಕೊಳ್ಳುತ್ತಿರುವ ಶಾಸಕ ಶಾಮನೂರು ಶಿವಶಂಕರಪ್ಪ ಅವರನ್ನು ಸನ್ಮಾನಿಸಿ, ಕೇಕ್ ಕತ್ತರಿಸಲಾಯಿತು.

ಈ ಸಂದರ್ಭದಲ್ಲಿ ಪಾಲಿಕೆ ಮೇಯರ್ ವಿನಾಯಕ್ ಪೈಲ್ವಾನ್, ಪಾಲಿಕೆ ಸದಸ್ಯರಾದ ಜೆ.ಡಿ. ಪ್ರಕಾಶ್, ಗಡಿಗುಡಾಳ್ ಮಂಜುನಾಥ್, ಜಾಕೀರ್, ಸುಧಾ ಇಟ್ಟಿಗುಡಿ, ಆಶಾ ಉಮೇಶ್, ಸೋಗಿ ಶಾಂತಕುಮಾರ್, ಉದಯ್ ಕುಮಾರ್, ಎಲ್.ಡಿ. ಗೋಣೆಪ್ಪ, ವೀರೇಶ್ ಪೈಲ್ವಾನ್, ಸವಿತಾ ಹುಲ್ಮನಿ, ಕಾರ್ಮಿಕ ಮುಖಂಡರಾದ ನೀಲಗಿರಿಯಪ್ಪ ಮತ್ತಿತರರು ಉಪಸ್ಥಿತರಿದ್ದರು.

# ಕ್ರಮಕ್ಕೆ ಪೊಲೀಸರಿಗೆ ಅಧಿಕಾರ

**(1ನೇ ಪುಟದಿಂದ)** ವಿವರಿಸಿದ್ದೇವೆ ಎಂದರು. ಜಿ.ಎಸ್.ಟಿ ಪಾವತಿ ದಾರರು ವಂಚನೆ ಮಾಡಿರುವುದು ಖಚಿತ ವಾದರೆ, ಅವರ ವಿರುದ್ಧ ವಾಣಿಜ್ಯ ತೆರಿಗೆ ಇಲಾಖೆ ವ್ಯಾಪ್ತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ. ಆದರೆ ಇಂತವರ ವಿರುದ್ಧ ಐಪಿಸಿ ಕಾಯ್ದೆಯಡಿ ಕ್ರಮ ಕೈಗೊಳ್ಳಬೇಕು ಎಂಬ ಶಿಫಾರಸ್ಸು ಮಾಡಿದ್ದೇವೆ ಎಂದರು. ಇದೇ ರೀತಿ ವರ್ತಕರು ಜಿಎಸ್ಟಿ ಪಾವತಿಸಿದ್ದಾರೆಯೇ?ಪಾವತಿಸಿದ್ದರೆ ಎಷ್ಟು ಪಾವತಿ ಮಾಡಿದ್ದಾರೆ?ಅಥವಾ ಜಿಎಸ್ಟಿ ಪಾವತಿಯನ್ನೇ ಮಾಡಿಲ್ಲವೇ?ಎಂಬ ಕುರಿತು ಪ್ರತಿಯೊಬ್ಬರಿಗೂ ಮಾಹಿತಿ ಸಿಗುವಂತಾಗಬೇಕು ಎಂಬುದು ರಾಜ್ಯ ಸರ್ಕಾರದ ನಿಲುವು.

ಆರ್.ಟಿ.ಐ ಅಡಿ ಅರ್ಜಿ ಸಲ್ಲಿಸಿ ವರ್ತಕರು ಜಿಎಸ್ಟಿ ಪಾವತಿಸಿದ್ದಾರೆಯೇ? ಇಲ್ಲವೇ? ಪಾವತಿಸಿದ್ದರೆ ಎಷ್ಟು ಪಾವತಿ ಮಾಡಿದ್ದಾರೆ?ಎಂಬ ಕುರಿತು ಮಾಹಿತಿ ಪಡೆಯಬಹುದು. ಆದರೆ ವರ್ತಕರ ಜಿಎಸ್ಟಿ ಸಲ್ಲಿಕೆಯ ಕುರಿತು ಬಯಸಿದವರಿಗೆ ತಕ್ಷಣ ಮಾಹಿತಿ ಸಿಗಬೇಕು ಎಂಬುದು ನಮ್ಮ ನಿಲುವು.

ಜಿಎಸ್ಟಿ ಪಾವತಿ ಮಾಡುವುದೂ ಸೇರಿದಂತೆ ಹಲವು ವಿಷಯಗಳು ಜಿಎಸ್ಟಿಯ ನಿಯಮಾವಳಿಯ ವ್ಯಾಪ್ತಿಯಲ್ಲಿವೆ. ಆದರೆ ಇದು ಕಾಯ್ದೆಯ ರೂಪದಲ್ಲಿರಬೇಕು ಎಂಬುದು ನಮ್ಮ ನಿಲುವು ಎಂದು ಸ್ಪಷ್ಟಪಡಿಸಿದರು.

ಜುಲೈ 13 ರಿಂದ 16 ರವರೆಗೆ ಹಂಪಿಯಲ್ಲಿ ಜಿ-20 ಶೃಂಗಸಭೆ ನಡೆಯಲಿದ್ದು, 33 ದೇಶಗಳ ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ದೇಶಗಳ ಮುಖ್ಯಸ್ಥರ ಪ್ರಧಾನ ಸಲಹೆಗಾರರು ಮತ್ತು ಅಧಿಕಾರಿಗಳು ಸೇರಿದಂತೆ ಹಲವು ಪ್ರಮುಖರು ಈ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದು, ಈ ಮಹತ್ವದ ಸಭೆಯ ಸಿದ್ಧತೆಗಾಗಿ 47.66 ಕೋಟಿ ರೂಪಾಯಿ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಈ ಸಂಬಂಧ ನಡೆದ ಸಭೆಯಲ್ಲಿ ಪ್ರವಾಸೋದ್ಯಮ, ಲೋಕೋಪಯೋಗಿ ಮತ್ತು ನಗರಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಮತ್ತು ಕನ್ನಡ-ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿಗಳು ಮತ್ತಿತರೆ ಅಧಿಕಾರಿಗಳು ಭಾಗವಹಿಸಿದ್ದರು.

ಜಿ-20 ಶೃಂಗಸಭೆ ನಡೆಯಲು ಅಗತ್ಯವಾದ ಪೂರ್ವಭಾವಿ ಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ವಿವಿಧ ಇಲಾಖೆಯ ಪ್ರಮುಖರಿಗೆ ಸೂಚಿಸಲಾಗಿದೆ. ಶೃಂಗಸಭೆಗೆ ಆಗಮಿಸುವ ಪ್ರಮುಖರಿಗೆ ಹಂಪಿ ಸೇರಿದಂತೆ ಕರ್ನಾಟಕದ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಹಲವು ಸ್ಥಳಗಳನ್ನು ತೋರಿಸಲಾಗುವುದು. ಈ ಅಂತಾರಾಷ್ಟ್ರೀಯ ಮಹತ್ವದ ಶೃಂಗಸಭೆಯನ್ನು ಯಶಸ್ವಿಗೊಳಿಸಲು ನಾಳೆಯಿಂದ ಸಮರೋಪಾದಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದರು.

# ರಾಣೇಬೆನ್ನೂರು : ಕುರಿಗಳ ಸಾವು, ಪರಿಹಾರಕ್ಕೆ ಸಿಎಂ ಬಳಿ ಮನವಿ



ರಾಣೇಬೆನ್ನೂರು, ಜೂ.16- ತಾಲ್ಲೂಕಿನ ಮಾಗೋಡ ಗ್ರಾಮದಲ್ಲಿ ವಿಷಪೂರಿತ ಆಹಾರ ಸೇವಿಸಿ, ಅಸು ನೀಗಿದ 40 ಕುರಿಗಳಿಗೆ ಪರಿಹಾರದ ಹಣ ನೀಡುವಂತೆ ರಾಣೇಬೆನ್ನೂರು ಶಾಸಕ ಪ್ರಕಾಶ್ ಕೋಳಿವಾಡ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸಿದರು.

# ತೆಲಂಗಾಣದಿಂದ ಅನ್ನಭಾಗ್ಯ ಯೋಜನೆ ಅಕ್ಕಿ

**(1ನೇ ಪುಟದಿಂದ)** ತಿಳಿಸಿವೆ. ತೆಲಂಗಾಣ ಹಾಗೂ ಕೇಂದ್ರ ಸರ್ಕಾರದ ನಡುವಿನ ಸಂಘರ್ಷದ ಹಿನ್ನೆಲೆಯಲ್ಲಿ ಅಲ್ಲಿ ಬೆಳೆದಿರುವ ಹೆಚ್ಚುವರಿ ಅಕ್ಕಿಯನ್ನು ಕೇಂದ್ರ ಆಹಾರ ನಿಗಮ ಪೂರ್ಣ ಪ್ರಮಾಣದಲ್ಲಿ ಖರೀದಿ ಮಾಡುತ್ತಿಲ್ಲ.

ಇದರಿಂದ ತೆಲಂಗಾಣದಲ್ಲಿ ಪ್ರಸ್ತುತ 38 ಲಕ್ಷ ಮೆ.ಟನ್ ಅಕ್ಕಿ ಸರ್ಕಾರದ ಉಗ್ರಾಣ ಮತ್ತು ರೈತರ ಬಳಿ ಉಳಿದುಕೊಂಡಿದೆ. ಇಡೀ ರಾಷ್ಟ್ರದಲ್ಲಿ ಹೆಚ್ಚು ಎಂದರೆ 76.83 ಲಕ್ಷ ಟನ್ ಭತ್ತ ಬೆಳೆಯುವ ರಾಜ್ಯ ತೆಲಂಗಾಣ ವಾಗಿದ್ದು, ಬೆಳೆದ ಬೆಳೆಯಲ್ಲಿ ಶೇ.50ರಷ್ಟು ಮಾರಾಟ ವಾಗದೇ ಉಳಿದೆ. ಕೇಂದ್ರ ಸರ್ಕಾರದ ಧೋರಣೆಯಿಂದ ಅಸಮಾಧಾನಗೊಂಡಿರುವ ತೆಲಂಗಾಣ ಸರ್ಕಾರಕ್ಕೆ ಕರ್ನಾಟಕದ ಬೇಡಿಕೆ ವರದಾನವಾಗಿದೆ.

ರೈತರು ಯಥೇಚ್ಛವಾಗಿ ಬೆಳೆಯುವ ಭತ್ತ ಪೂರ್ಣ ಪ್ರಮಾಣದಲ್ಲಿ ಮಾರಾಟವಾಗದೇ ಉಳಿದಿರುವುದರಿಂದ ಅಲ್ಲಿನ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳ ಪ್ರತಿ ಯುನಿಟ್‌ಗೆ 5 ಕೆ.ಜಿ. ಹೆಚ್ಚುವರಿಯಾಗಿ ಅಕ್ಕಿ ನೀಡುವ ಭರವಸೆ ನೀಡಿತ್ತು. ಅಧಿಕಾರಕ್ಕೆ ಬಂದ ನಂತರ ಯೋಜನೆ ಅನುಷ್ಠಾನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶ ಮಾಡಿ ಸಂಪುಟದ ಒಪ್ಪಿಗೆಯೂ ದೊರೆಯಿತು.

ಈ ಯೋಜನೆಗೆ ಅಗತ್ಯವಾಗಿರುವ 2.28 ಲಕ್ಷ ಮೆ.ಟನ್ ಅಕ್ಕಿಯನ್ನು ಪೂರೈಸುವಂತೆ ಕೇಂದ್ರ ಆಹಾರ ನಿಗಮಕ್ಕೆ ಮಾಡಿದ ಮನವಿಗೂ ಸ್ಪಂದನೆ ದೊರೆತಿತ್ತು.

ಬದಲಾದ ಕೇಂದ್ರದ ನಿಲುವಿನಿಂದ ಕೊನೆ ಗಳಿಗೆಯಲ್ಲಿ ಆಹಾರ ನಿಗಮವು ಅಕ್ಕಿ ನೀಡಲು ನಿರಾಕರಿಸಿದ್ದರಿಂದ ರಾಜ್ಯ ಸಂಕಷ್ಟಕ್ಕೆ ಸಿಲುಕಿದ್ದು, ಜುಲೈ ಒಂದರಿಂದ ಗ್ಯಾರಂಟಿ ಅನುಷ್ಠಾನಗೊಳಿಸುವುದು ಅನುಮಾನವಾಗಿದೆ.

ಇಂತಹ ಪರಿಸ್ಥಿತಿಯಲ್ಲಿ ತೆಲಂಗಾಣ, ಛತ್ತೀಸ್‌ಘಡ, ಆಂಧ್ರಪ್ರದೇಶ ಸೇರಿದಂತೆ ಅತಿಹೆಚ್ಚು ಭತ್ತ ಬೆಳೆಯುವ ರಾಜ್ಯಗಳ ಸಂಪರ್ಕ ಮಾಡಿ ತಮಗೆ ಅಕ್ಕಿ ಲಭ್ಯತೆ ಬಗ್ಗೆ ಮಾತುಕತೆ ನಡೆಸಿದ್ದರು.

ಸಿದ್ದರಾಮಯ್ಯ ಅವರು ತೆಲಂಗಾಣ ಮುಖ್ಯಮಂತ್ರಿ ಅವರೊಂದಿಗೆ ದೂರವಾಣಿ ಮೂಲಕ ಚರ್ಚೆ ನಡೆಸಿದ ನಂತರ ಅಲ್ಲಿನ ಆಹಾರ ಮತ್ತು ನಾಗರಿಕ ಪೂರೈಕೆ ಸಚಿವಾಲಯವು ಕರ್ನಾಟಕಕ್ಕೆ ಅಗತ್ಯವಿರುವ ಅಕ್ಕಿ ಸರಬರಾಜು ಮಾಡುವ ಸಂಬಂಧ ಆಂತರಿಕವಾಗಿ ಚರ್ಚಿಸಿದ್ದು, ಅಂತಿಮವಾಗಿ ಅಕ್ಕಿ ನೀಡಲು ತೀರ್ಮಾನಿಸಿದೆ.

ಇದೀಗ ರಾಜ್ಯ ಸರ್ಕಾರ ತೆಲಂಗಾಣ ಸರ್ಕಾರದೊಂದಿಗೆ ಅಕ್ಕಿ ಖರೀದಿಗೆ ಸಂಬಂಧಿಸಿದಂತೆ ಚರ್ಚೆ ನಡೆಸಿ ಒಪ್ಪಂದ ಮಾಡಿಕೊಳ್ಳಬೇಕು. ಇದಾದ ನಂತರ ರಾಜ್ಯಕ್ಕೆ ಅಗತ್ಯವಿರುವಷ್ಟು ಅಕ್ಕಿ ದೊರೆಯಲಿದೆ.

# ಕುಂಬಳೂರು ಶಾಲೆಯಲ್ಲಿ ನೋಟ್ ಬುಕ್ ವಿತರಣೆ




ಮಲೇಬೆನ್ನೂರು, ಜೂ.16- ಕುಂಬಳೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಯಲ್ಲಿ ಬೆಂಗಳೂರಿನ ಇಂಡಿಯಾ ಸುಧಾರ್ ಸಂಸ್ಥೆಯಿಂದ ಶಾಲಾ ಮಕ್ಕಳಿಗೆ ನೋಟ್ ಪುಸ್ತಕ ಮತ್ತು ಶಾಲೆಗೆ ಕ್ರೀಡಾ ಸಾಮಗ್ರಿಗಳನ್ನು ಶುಕ್ರವಾರ ವಿತರಿಸಲಾಯಿತು.

ಇಂಡಿಯಾ ಸುಧಾರ ಸಂಸ್ಥೆಯ ನಿರ್ದೇಶಕ ಕಿರಣ್ ಮಾತನಾಡಿ, ಮಕ್ಕಳು ಹಾಳೆಯನ್ನು ಹರಿಯದೇ ಉಪಯುಕ್ತ ಬರವಣಿಗೆ ಮಾಡಿ ಪ್ರತಿಭಾವಂತ ಮಕ್ಕಳಾಗಿ ಹೊರ ಬಂದು ಪೋಷಕರಿಗೆ ಶಿಕ್ಷಕರಿಗೆ ಗ್ರಾಮಕ್ಕೆ ಕೀರ್ತಿ ತರಬೇಕು ಎಂದು ಕರೆ ನೀಡಿದರು.

ಎಸ್‌ಡಿಎಂಸಿ ಅಧ್ಯಕ್ಷ ಎಂ.ಹೆಚ್.ಶರಣ್ ಅಧ್ಯಕ್ಷತೆ ವಹಿಸಿದ್ದರು. ಎಸ್‌ಡಿಎಂಸಿ ಸದಸ್ಯರಾದ ಹೆಚ್.ಎಂ.ಸದಾ ನಂದ, ಕೆ.ಕಾಮರಾಜ್, ಮುಖ್ಯ ಶಿಕ್ಷಕಿ ಲೀಲಾವತಿ, ದೈಹಿಕ ಶಿಕ್ಷಕಿ ಪರಿಮಳ ಹಾಗೂ ಬೇರೆ ಶಾಲೆಗಳ ಮುಖ್ಯ ಶಿಕ್ಷಕ ರಾದ ನಂದಿತಾವರೆಯ ಉಮೇಶ್, ಹರಿಹರದ ರೇವಣ ನಾಯಕ್ ಮತ್ತು ಇತರರು ಹಾಜರಿದ್ದರು. ಶಿಕ್ಷಕಿ ನೇತ್ರಾವತಿ ನಿರೂಪಿಸಿದರೆ, ನಾಗಮಂಜುಳ ಜೋಶಿ ವಂದಿಸಿದರು.


## ಜನ್ಮದಿನದ ಶುಭಾಶಯಗಳು



ದಾವಣಗೆರೆ ಜನರಿಗೆ ಅಮೃತ ಸ್ವರೂಪವಾದ
ಲಸಿಕೆ ಕೊಟ್ಟ ಹೃದಯ ಶ್ರೀಮಂತರು,
ಆರನೇ ಬಾರಿಗೆ ವಿಧಾನಸಭೆ ಪ್ರವೇಶಿಸಿ
ಗಿನ್ನಿಸ್ ದಾಖಲೆಗೆ ಅರ್ಹರಾದವರು,
ಬಾಪೂಜಿ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿಗಳು,
ಹಾಗೂ ನಮ್ಮೆಲ್ಲರ ಅಚ್ಚುಮೆಚ್ಚಿನ

**ಡಾ|| ಶಾಮನೂರು ಶಿವಶಂಕರಪ್ಪಾಜಿ**


ಅವರಿಗೆ 93 ನೇ ಜನ್ಮದಿನದ ಶುಭಾಶಯಗಳು
ಶ್ರೀಯುತರು ನೂರ್ಕಾಲ ಬಾಳಲಿ ಎಂದು ಪ್ರಾರ್ಥಿಸುತ್ತೇವೆ.


ಪ್ರಾಂಶುಪಾಲರು, ಉಪ ಪ್ರಾಂಶುಪಾಲರು, ಆಡಳಿತಾಧಿಕಾರಿಗಳು, ಅಧೀಕ್ಷಕರು,
ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿ ವೃಂದ

**ಜೆಜೆಎಂ ವೈದ್ಯಕೀಯ ಕಾಲೇಜು, ದಾವಣಗೆರೆ.**



## 93 ನೇ ಜನ್ಮದಿನದ ಶುಭಾಶಯಗಳು





ಕರ್ನಾಟಕದ ಮ್ಯಾಂಚೆಸ್ಟರ್ ಆಗಿದ್ದ
ದಾವಣಗೆರೆಯನ್ನು ವಿದ್ಯಾಕಾಶಿಯನ್ನಾಗಿ
ಮಾಡಿದ ಧೀಮಂತರು, ಅಖಿಲ ಭಾರತ
ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು,
ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಸಕರು,
ಬಾಪೂಜಿ ವಿದ್ಯಾಸಂಸ್ಥೆಯ
ಗೌರವ ಕಾರ್ಯದರ್ಶಿಗಳು ಹಾಗು
ನಮ್ಮ ನಿಮ್ಮೆಲ್ಲರ ಅಚ್ಚುಮೆಚ್ಚಿನ ಅಪ್ಪಾಜಿ

**ಶ್ರೀ ಡಾ|| ಶಾಮನೂರು ಶಿವಶಂಕರಪ್ಪ**

ಅವರಿಗೆ 93 ನೇ ಜನ್ಮದಿನದ ಹಾರ್ದಿಕ ಶುಭಾಶಯಗಳು

ಪ್ರಾಂಶುಪಾಲರು, ಆಡಳಿತಾಧಿಕಾರಿಗಳು, ಬೋಧಕ-ಬೋಧಕೇತರ
ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು

**ಎಸ್.ಎಸ್. ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ದಾವಣಗೆರೆ.**

## ನೆಹರು ಸ್ಮಾರಕದ ಹೆಸರು ಬದಲಾವಣೆ

ನವದೆಹಲಿ, ಜೂ. 16 - ತೀನ್ ಮೂರ್ತಿ ಭವನದಲ್ಲಿರುವ ನೆಹರು ಸ್ಮಾರಕ ಸಂಗ್ರಹಾಲಯ ಹಾಗೂ ಗ್ರಂಥಾಲಯದ (ಎನ್.ಎಂ.ಎಂ.ಎಲ್.) ಹೆಸರು ಬದಲಿಸಿದ್ದು, ಅದಕ್ಕೆ ಪ್ರಧಾನ ಮಂತ್ರಿಗಳ ವಸ್ತು ಸಂಗ್ರಹಾಲಯ ಹಾಗೂ ಗ್ರಂಥಾಲಯ ಎಂಬ ಹೆಸರಿಡಲಾಗಿದೆ.

ತೀನ್ ಮೂರ್ತಿ ಭವನವು ದೇಶದ ಪ್ರಥಮ ಪ್ರಧಾನಿ ಜವಾಹರಲಾಲ್ ನೆಹರು ಅವರ ಅಧಿಕೃತ ನಿವಾಸವಾಗಿತ್ತು.

**ಕಾಂಗ್ರೆಸ್ ಆಕ್ಷೇಪ, ಬಿಜೆಪಿ ಸಮರ್ಥನೆ**

ಸ್ಮಾರಕ ಸೊಸೈಟಿಯ ವಿಶೇಷ ಸಭೆಯಲ್ಲಿ ಹೆಸರು ಬದಲಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಕೇಂದ್ರ ಸಂಸ್ಕೃತಿ ಇಲಾಖೆ ತಿಳಿಸಿದೆ.

ಸೊಸೈಟಿಯ ಉಪಾಧ್ಯಕ್ಷರೂ ಆಗಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಹೆಸರು ಬದಲಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ.

ನಂತರ ಹೇಳಿಕೆ ನೀಡಿರುವ ಸಿಂಗ್, ನೆಹರು ಅವರಿಂದ ಹಿಡಿದು ನರೇಂದ್ರ ಮೋದಿವರೆಗೆ ಎಲ್ಲ ಪ್ರಧಾನಿಗಳ ಕೊಡುಗೆಯನ್ನು ಇಲ್ಲಿ ಬಿಂಬಿಸಲಾಗುತ್ತಿದೆ. ಹೀಗಾಗಿ ಹೊಸ ಹೆಸರು ಇಡಲು ತೀರ್ಮಾನಿಸಲಾಗಿದೆ ಎಂದರು.

ನೆಹರು ಸ್ಮಾರಕ ಸಂಗ್ರಹಾಲಯದ ಹೆಸರು ಬದಲಾವಣೆಗೆ ಆಕ್ಷೇಪಿಸಿರುವ ಕಾಂಗ್ರೆಸ್, ಇದು ಸಣ್ಣತನದ ಕೃತ್ಯ ಎಂದು ಹೇಳಿದೆ.

ಈ ಬಗ್ಗೆ ಹೇಳಿಕೆ ನೀಡಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬಿಜೆಪಿಯ ಸಣ್ಣತನ ಹಾಗೂ ಸರ್ವಾಧಿಕಾರಿ ಮನೋಭಾವವನ್ನು ಇದು ತೋರಿಸುತ್ತಿದೆ. ಆಧುನಿಕ ಭಾರತದ ಶಿಲ್ಪಿ ನೆಹರು ಅವರ ಬೃಹತ್ ಕೊಡುಗೆಯನ್ನು ಕಡಿಮೆ ಮಾಡಲಾಗದು ಎಂದಿದ್ದಾರೆ.

ಆದರೆ, ಕಾಂಗ್ರೆಸ್ ಆರೋಪಗಳನ್ನು ತಳ್ಳಿ ಹಾಕಿರುವ ಬಿಜೆಪಿ ವಕ್ತಾರ ಹಾಗೂ ರಾಜ್ಯಸಭಾ ಸದಸ್ಯ ಸುಧಾಂಶು ತ್ರಿವೇದಿ, ದೇಶದ ಪ್ರಥಮ ಪ್ರಧಾನ ಮಂತ್ರಿ ಜವಾಹರಲಾಲ್ ನೆಹರು ಹಾಗೂ ನಂತರದ ಪ್ರಧಾನ ಮಂತ್ರಿಗಳ ಕೊಡುಗೆಯನ್ನು ಯಾವ ರೀತಿ ಬಿಂಬಿಸಲಾಗಿದೆ ಎಂಬುದನ್ನು ನೋಡದೇ ಕಾಂಗ್ರೆಸ್ ನಾಯಕರು ಟೀಕಿಸುತ್ತಿದ್ದಾರೆ ಎಂದಿದ್ದಾರೆ.

ಲಾಲ್ ಬಹದ್ದೂರ್ ಶಾಸ್ತ್ರಿ, ಇಂದಿರಾ ಗಾಂಧಿ, ಪಿ.ವಿ. ನರಸಿಂಹ ರಾವ್, ರಾಜೀವ್ ಗಾಂಧಿ ಹಾಗೂ ಮನಮೋಹನ್ ಸಿಂಗ್ ಅವರ ಕೊಡುಗೆಯನ್ನೂ ಬಿಂಬಿಸಲಾಗಿದೆ. ನರಸಿಂಹ ರಾವ್ ಅವರ ಬಗ್ಗೆ ಕಾಂಗ್ರೆಸ್‌ಗೆ ಕಹಿ ಭಾವನೆ ಇರಬಹುದು. ಆದರೆ, ಉಳಿದವರ ಸಾಧನೆ ಬಿಂಬಿಸುವುದರ ಬಗ್ಗೆ ಕಾಂಗ್ರೆಸ್‌ಗೆ ಏನು ತೊಂದರೆ ಇದೆ ಎಂದವರು ಪ್ರಶ್ನಿಸಿದ್ದಾರೆ.

## ಸಾವರ್ಕರ್ ಪಠ್ಯ ತೆಗೆಯುವುದರಿಂದ ಉಲ್ಟಾ ಪರಿಣಾಮ : ಮೊಮ್ಮಗ

ಪಣಜಿ, ಜೂ. 16 - ಹಿಂದುತ್ವ ವಿಚಾರವಾದಿ ವಿ.ಡಿ. ಸಾವರ್ಕರ್ ಅವರ ಪಾಠವನ್ನು ಶಾಲಾ ಪಠ್ಯದಿಂದ ತೆಗೆದು ಹಾಕಲು ಕರ್ನಾಟಕದ ಕಾಂಗ್ರೆಸ್ ಸರ್ಕಾರ ನಿರ್ಧರಿಸಿರುವುದು ವಿರುದ್ಧ ಪರಿಣಾಮ ಬೀರಲಿದೆ ಎಂದು ಸಾವರ್ಕರ್ ಮೊಮ್ಮಗ ರಣಜಿತ್ ಸಾವರ್ಕರ್ ಹೇಳಿದ್ದಾರೆ. ಈ ರೀತಿ ಪಾಠ ತೆಗೆದು ಹಾಕುವುದರಿಂದ ವಿದ್ಯಾರ್ಥಿಗಳಿಗೆ ಸಾವರ್ಕರ್ ಕುರಿತು ತಿಳಿಯುವ ಅವಕಾಶ ಸಿಗುವುದಿಲ್ಲ. ಆದರೆ, ವಿದ್ಯಾರ್ಥಿಗಳು ಚತುರರಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ಸಾವರ್ಕರ್ ಮಾಹಿತಿ ಲಭ್ಯವಿದೆ ಎಂದವರು ಹೇಳಿದರು. ಸಾವರ್ಕರ್ ಸ್ಮಾರಕವು ಅವರ ಕುರಿತ ಸಾಹಿತ್ಯವನ್ನು ವೆಬ್‌ತಾಣದಲ್ಲಿ ಪ್ರಕಟಿಸಿದೆ. ಕನ್ನಡದಲ್ಲೂ ಈ ಮಾಹಿತಿ ಲಭ್ಯವಿದೆ ಎಂದವರು ತಿಳಿಸಿದರು.

# ಕೊಟ್ಟು ಕಿತ್ತುಕೊಳ್ಳುವ ಗ್ಯಾರಂಟಿ ವ್ಯವಸ್ಥೆ

### ತನ್ವೀರ್ ಸೇಠ್, ಶಾಮನೂರು ಶಿವಶಂಕರಪ್ಪ ಅವರೇ ಕಾಂಗ್ರೆಸ್ ನೀತಿ ಪ್ರಶ್ನಿಸುತ್ತಿದ್ದಾರೆ : ಅಶೋಕ್

ಬೆಂಗಳೂರು, ಜೂ. 16 - ವಿದ್ಯುತ್ ದರ ಏರಿಕೆಯಿಂದ ಕೈಗಾರಿಕೆಗಳು ಬೇರೆ ರಾಜ್ಯಕ್ಕೆ ಹೋಗುವ ಮಾತು ಕೇಳಿಬರುತ್ತಿದೆ. 10 ರೂ. ಕೊಟ್ಟು 20 ರೂ. ಕಿತ್ತುಕೊಳ್ಳುವ ಗ್ಯಾರಂಟಿ ವ್ಯವಸ್ಥೆಯನ್ನು ಕಾಂಗ್ರೆಸ್ ಸರ್ಕಾರ ಜಾರಿ ಮಾಡುತ್ತಿದೆ ಎಂದು ಮಾಜಿ ಸಚಿವ ಆರ್ ಅಶೋಕ್ ಟೀಕಿಸಿದ್ದಾರೆ.



ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣಾ ಪ್ರಚಾರದ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 'ಏಯ್ ಮಹದೇವಪ್ಪ ನಿನಗೂ ಫ್ರೀ, ನನಗೂ ಫ್ರೀ; ಕಾಕಾ ಪಾಟೀಲ್ ನಿನಗೂ ಫ್ರೀ' ಎಂದಿದ್ದರು. ಷರತ್ತು ವಿಧಿಸುವ ಬಗ್ಗೆ ಹೇಳಿರಲಿಲ್ಲ ಎಂದರು.

ಈಗ ಹೊಸ ಮನೆಗೆ ಸರಾಸರಿ ಎಂಬ ಷರತ್ತು ಹಾಕಲಾಗುತ್ತಿದೆ. ಠೇವಣಿ ಶೇ. 65ರಷ್ಟು ಹೆಚ್ಚಳ ಮಾಡಿದ್ದಾರೆ. ತಾತ್ಕಾಲಿಕ ಸಂಪರ್ಕಕ್ಕೆ ಶೇ. 70ರಷ್ಟು ಠೇವಣಿ ಸಂಗ್ರಹ ಮಾಡಲಾಗುತ್ತಿದೆ ಎಂದು ಟೀಕಿಸಿದರು.

ಕಾಂಗ್ರೆಸ್ ಪಕ್ಷದ ತನ್ವೀರ್ ಸೇಠ್, ಶಾಮನೂರು ಶಿವಶಂಕರಪ್ಪ ಅವರೇ ಕಾಂಗ್ರೆಸ್ ಸರ್ಕಾರದ ನೀತಿಯನ್ನು ಪ್ರಶ್ನೆ ಮಾಡುವಂತಾಗಿದೆ. ಜನರ ಗಮನ ಬೇರೆಡೆ ಸೆಳೆಯಲು ಈ ಕ್ಯಾಬಿನೆಟ್ ನಿರ್ಧಾರ ಮಾಡಿದ್ದಾರೆ. ಇವುಗಳ ವಿರುದ್ಧ ವಿಧಾನಸಭೆ ಹೊರಗೆ ಮತ್ತು ಒಳಗಡೆ ಪ್ರತಿಭಟಿಸುತ್ತೇವೆ ಎಂದು ತಿಳಿಸಿದರು.

**ವಿದ್ಯುತ್ ದರ ಹೆಚ್ಚಳ ಒಂದು ಕಳ್ಳಾಟ:** 70 ಪೈಸೆ ಹೆಚ್ಚಿಸಿದ್ದಾರೆ. ಬೇಕಾದುದೆಲ್ಲ ಕಾಂಗ್ರೆಸ್ ಪಕ್ಷದ್ದು. ಬೇಡದ್ದೆಲ್ಲವೂ ಬಿಜೆಪಿಯದು ಎಂದು ತಿಳಿಸಿದರು. ಕೇಂದ್ರವು ಅಕ್ಕಿ ವಿಚಾರದಲ್ಲಿ ಸಮಸ್ಯೆ ತಂದೊಡ್ಡಿದೆ ಎಂದರೆ, ಕೇಳಿದೊಡನೆ ಕೊಡಲು ಕೇಂದ್ರ ಎಂದರೆ ಅತ್ತೆ ಮನೆಯೇ? ಘೋಷಿಸುವ ಮೊದಲೇ ನಿಮಗೆ ಜ್ಞಾನ, ಪ್ರಜ್ಞೆ ಇರಲಿಲ್ಲವೇ? ನಾಳೆ ಕರ್ನಾಟಕವನ್ನು ಮಾರಾಟ ಮಾಡುತ್ತೇವೆ ಎಂದರೆ ಕೇಂದ್ರ ಎಸ್ ಎನ್ನಬೇಕೇ? ಎಂದು ಪ್ರಶ್ನೆಗಳನ್ನು ಮುಂದಿಟ್ಟರು.

**'ಊಟಕ್ಕೆ ಕೂತರೆ ನಂದೂ ನಂದೇ; ನಿನ್ನದೂ ನಂದೇ'** ಎಂಬಂತಾಗಿದೆ. ಗ್ಯಾರಂಟಿಗಳ ಅನುಷ್ಠಾನಕ್ಕೆ 1 ಲಕ್ಷದ 10 ಸಾವಿರ ಕೋಟಿ ಹಣ ಬೇಕು. ರಾಜ್ಯ ಇನ್ನೊಂದು ವರ್ಷದಲ್ಲಿ ದಿವಾಳಿ ಆಗಲಿದೆ. ಕಾನೂನನ್ನು ಎಲ್ಲರೂ ಕೈಗೆ ತೆಗೆದುಕೊಳ್ಳುತ್ತಿದ್ದಾರೆ. ಅಂಗನವಾಡಿ, ಸಣ್ಣ ಕೈಗಾರಿಕೆ, ಸ್ತ್ರೀಶಕ್ತಿ ಸಂಘಗಳ ಗಲಾಟೆ ಮುಂದುವರೆಯುವಂತಾಗಿದೆ. ಇದು ಕಾಂಗ್ರೆಸ್ ಪಕ್ಷದ ಅಜಾಗರೂಕತೆಯ ಸೃಷ್ಟಿ ಎಂದು ಟೀಕಿಸಿದರು.

ವಿದ್ಯುತ್ ದರದ ವಿಚಾರದಲ್ಲಿ ಮೋಸಗಾರರು ಯಾರು? ಎಂದು ಕೇಳಿದ ಅವರು, ಕಳೆದ ಬಾರಿ ಮತ್ತು ಈ ಬಾರಿಯ ಬಿಲ್ಲನ್ನು ಸೋಷಿಯಲ್ ಮೀಡಿಯಾಕ್ಕೆ ಹಾಕಿ ಎಂದು ಮನವಿ ಮಾಡಿದರು. ಕೊಟ್ಟಂಗೆ ತೋರಿಸಿ ಎಲ್ಲ ಕಿತ್ಕೊಳ್ಳೋದು ಎಂಬ ದುಸ್ಥಿತಿ ಕಾಂಗ್ರೆಸ್‌ನವರದು ಎಂದು ಆಕ್ಷೇಪಿಸಿದರು.

ಆಟೋ, ಟ್ಯಾಕ್ಸಿಯವರೂ ಬೀದಿಗೆ ಇಳಿಯುವಂತಾಗಿದೆ. ಮಾನ ಮರ್ಯಾದೆ ಇದ್ರೆ ಯೋಚನೆ ಮಾಡಿ ಇದನ್ನು ಜಾರಿಗೊಳಿಸಬೇಕಿತ್ತು ಎಂದು ತಿಳಿಸಿದರು. ಕೇವಲ ಮತಕ್ಕಾಗಿ ಏನೇನು ಮಾಡಬಹುದು ಎಂಬುದನ್ನು ಕಾಂಗ್ರೆಸ್ ಮಾಡಿ ತೋರಿದೆ ಎಂದು ನುಡಿದರು.

ಕಾಂಗ್ರೆಸ್, ಟಿಪ್ಪು ಆಡಳಿತವನ್ನು ಜಾರಿಗೊಳಿಸಲು ಹೊರಟಿದೆ. ಕಾಂಗ್ರೆಸ್ ದುರಾಡಳಿತ, ಅರಾಜಕತೆ, ಗ್ಯಾರಂಟಿ ವಿಚಾರದಲ್ಲಿ ಕಂಡೀಷನ್, ವಿವಿಧ ಕಾಯ್ದೆಗಳ ಹಿಂತೆಗೆತದ ನಿರ್ಧಾರವನ್ನು ಖಂಡಿಸಿ ಜಿಲ್ಲೆ, ತಾಲ್ಲೂಕು ಕೇಂದ್ರಗಳಲ್ಲಿ 19ರಂದು ಆಂದೋಲನದ ಕುರಿತು ಸಭೆ ನಡೆಸಲಿದೆ ಬಳಿಕ ಜನಾಂದೋಲನ ರೂಪಿಸಲಿದ್ದೇವೆ ಎಂದರು.

### ರೈತರಿಗೆ ಆದಾಯವೋ, ದಲ್ಲಾಳಿಗಳಿಗೆ ಲಾಭವೋ?

**ಎಪಿಎಂಸಿ ತಿದ್ದುಪಡಿಗೆ ಆಕ್ಷೇಪ**

ಎ.ಪಿ.ಎಂ.ಸಿ. ಕಾಯ್ದೆಗೆ ರಾಜ್ಯ ಕಾಂಗ್ರೆಸ್ ಸರ್ಕಾರ ತಿದ್ದುಪಡಿ ತರುವುದರಿಂದ ರೈತರಿಗೆ ಆದಾಯ ಹೆಚ್ಚಾಗುವ ಬದಲು, ದಲ್ಲಾಳಿಗಳ ಲಾಭ ಹೆಚ್ಚಾಗಲಿದೆ ಎಂದು ಮಾಜಿ ಸಚಿವ ಆರ್. ಅಶೋಕ್ ಆರೋಪಿಸಿದ್ದಾರೆ.

ಹಿಂದೆ ರೈತರು ಬೆಳೆದ ಉತ್ಪನ್ನಗಳನ್ನು ಮಾರಾಟ ಮಾಡಲು ಎಪಿಎಂಸಿ ಆರಂಭವಾಗಿತ್ತು. ಅದೊಂದು ರೀತಿಯ ಗುತ್ತಿಗೆ ಕೊಡುವ ಪ್ರಯತ್ನ. ದಲ್ಲಾಳಿಗಳು ಗೇಟಿನಲ್ಲೇ ನಿಂತು ಖರೀದಿಸಿ ಲಾಭ ಮಾಡುವ ವ್ಯವಸ್ಥೆ ಅದು ಎಂದವರು ಹೇಳಿದರು.

ನಾವು ಮಾಡಿದ ತಿದ್ದುಪಡಿಯಡಿ ದೇಶದ ಎಲ್ಲಿ ಬೇಕಾದರೂ ಮಾರಾಟ ಮಾಡುವ ಅವಕಾಶ ಇದೆ. ರೈತರಿಗೆ ಸಾವಿರಾರು ಕೋಟಿ ಆದಾಯ ಸಿಗಬೇಕೇ? ಅಥವಾ ಎಪಿಎಂಸಿಗೆ ಲಾಭ ಆಗಬೇಕೇ? ದಲ್ಲಾಳಿಗಳ ಲಾಭ ಹೆಚ್ಚಬೇಕೇ? ಎಂದು ಕೇಳಿದರು. ದಲ್ಲಾಳಿಗಳಿಗೆ ಉಪಯೋಗ ಮಾಡುವ ಹುನ್ನಾರ ಇದರಡಿ ಇದೆ. ತೂಕದಲ್ಲೇ ವ್ಯತ್ಯಾಸ ಮಾಡುತ್ತಿದ್ದರು. ಆದರೆ, ನಾವು ತಕ್ಕಡಿಯನ್ನು ರೈತರ ಕೈಗೆ ಕೊಟ್ಟಿದ್ದೆವು. ಕಾಂಗ್ರೆಸ್, ದಲ್ಲಾಳಿಗಳ ರಾಜ್ಯ ಮಾಡಲು ಹೊರಟಿದೆ ಎಂದು ಆಕ್ಷೇಪಿಸಿದರು.

## ಕನ್ನಡಿಗರನ್ನು ರಂಜಿಸುತ್ತಿರುವ ಸಿರಿಕನ್ನಡ ವಾಹಿನಿ

ದಾವಣಗೆರೆ, ಜೂ. 16 - ಸಿರಿಕನ್ನಡ ವಾಹಿನಿ ಕ್ರಿಯಾತ್ಮಕ ಕಾರ್ಯಕ್ರಮಗಳ ಮೂಲಕ ಕನ್ನಡಿಗರ ಮನೆ ಮನ ರಂಜಿಸುತ್ತಿದೆ. ಹೆಸರಾಂತ ಹಾಸ್ಯ ಕಲಾವಿದ ಹಿತೇಶ್, ಜನಪ್ರಿಯ ನಿರೂಪಕಿ ಹೇಮಾ ಅವರ ನಿರೂಪಣೆಯಲ್ಲಿ, ತ್ಯಾಗರಾಜ್ ಅವರ ಸಾರಥ್ಯದಲ್ಲಿ ಪ್ರತಿ ಸೋಮವಾರದಿಂದ ಶುಕ್ರವಾರದವರೆಗೆ ಸಂಜೆ 6 ಗಂಟೆಗೆ ಪ್ರಸಾರವಾಗುತ್ತಿರುವ ಸಖತ್ ಜೋಡಿ ಕಾರ್ಯಕ್ರಮವು ಈಗಾಗಲೇ ಹೆಂಗಳೆಯರ ಮನ ಗೆಲ್ಲುವಲ್ಲಿ ಯಶಸ್ವಿಯಾಗಿದೆ.

ಸಖತ್ ಜೋಡಿ ಕಾರ್ಯಕ್ರಮದಲ್ಲಿ ಎಲ್ಲಾ ಮಹಿಳೆಯರು ಭಾಗವಹಿಸಬಹುದು. ಈಗಾಗಲೇ ಸ್ಯಾಂಡಲ್‌ವುಡ್ ಹಾಗೂ ಕಿರುತೆರೆಯ ಜನಪ್ರಿಯ ಕಲಾವಿದರು ಭಾಗವಹಿಸಿದ್ದಾರೆ.

ಕಲಾ ಸಾಮ್ರಾಟ್ ಎಸ್. ನಾರಾಯಣ್ ಅವರ ಪುತ್ರ ಪಂಕಜ್ ಕಿರುತೆರೆಯಲ್ಲಿ ಪ್ರಪ್ರಥಮ ಬಾರಿಗೆ ನಾಯಕ ನಟನಾಗಿ ಅಭಿನಯಿಸಿರುವ ಊರ್ಮಿಳ ಧಾರಾವಾಹಿ ಸೋಮವಾರದಿಂದ ಶುಕ್ರವಾರ ರಾತ್ರಿ 8.30 ಕ್ಕೆ ಪ್ರಸಾರವಾಗುತ್ತಿದೆ.

ನಿರ್ದೇಶಕ ರವಿ ಗರಣಿ ಅವರ ಕಥೆ, ಸಂಜೀವ್ ತಗಡೂರ್ ನಿರ್ದೇಶನದ, ಹೆತ್ತ ಮಗಳೇ ಸೊಸೆಯಾಗಿ ಬರುವ ವಿಭಿನ್ನ ಕಥಾ ಹಂದರದ ಅದ್ದೂರಿ ಧಾರಾವಾಹಿ ಬ್ರಾಹ್ಮಿನ್ಸ್ ಕೆಫೆ ರಾತ್ರಿ 9.30 ಕ್ಕೆ ಪ್ರಸಾರವಾಗುತ್ತಿದ್ದು, ಕೆಲವೇ ದಿನಗಳಲ್ಲಿ ವೀಕ್ಷಕರ ಮನಸೂರೆಗೊಂಡಿದೆ ಎಂದು ಸಿರಿಕನ್ನಡ ವಾಹಿನಿಯ ಸಂಸ್ಥಾಪಕ ನಿರ್ದೇಶಕರಾದ ಸಂಜಯ್ ಶಿಂಧೆ ಅವರು ತಿಳಿಸಿದ್ದಾರೆ.

ಸಿರಿಕನ್ನಡ ವಾಹಿನಿಯನ್ನು ತಪ್ಪದೇ ನೋಡುವ ವೀಕ್ಷಕರು ಇದೇ ಜೂನ್ 15 ರಿಂದ ಪ್ರತಿ ಅರ್ಧ ಗಂಟೆಗೊಮ್ಮೆ ಟಿವಿ, ರೆಫ್ರಿಜರೇಟರ್, ವಾಷಿಂಗ್‌ಮೆಷಿನ್, ಇತ್ಯಾದಿ ಆಕರ್ಷಕ ಬಹುಮಾನಗಳನ್ನು ಕೇವಲ ಮಿಸ್ ಕಾಲ್ ಕೊಡುವ ಮೂಲಕ ಸುಲಭವಾಗಿ ತಮ್ಮದಾಗಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ವಾಹಿನಿಯನ್ನು ವೀಕ್ಷಿಸಬೇಕೆಂದು ವಾಹಿನಿಯ ಮುಖ್ಯಸ್ಥರಾದ ರಾಜೇಶ್ ರಾಜಘಟ್ಟ ಅವರು ಹೇಳಿದ್ದಾರೆ.

## 93ಕ್ಕೆ ಕಾಲಿಟ್ಟ ಎಸ್ಸೆಸ್

**(1ನೇ ಪುಟದಿಂದ)** ಸೌಲಭ್ಯಗಳ ವಿತರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಧ್ಯಾಹ್ನ 4 ಗಂಟೆಗೆ ವೇಳೆಗೆ ಎಸ್.ಎಸ್. ಮಾಲ್ ನಲ್ಲಿ ಅಭಿಮಾನಿ ಬಳಗದಿಂದ ಹಮ್ಮಿಕೊಂಡಿದ್ದ ಅದ್ದೂರಿ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಈ ವೇಳೆ ಅಖಿಲ ಭಾರತ ವೀರಶೈವ ಮಹಾಸಭಾದ ಪ್ರಧಾನ ಕಾರ್ಯದರ್ಶಿಗಳೂ, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರೂ ಆದ ಈಶ್ವರ ಬಿ.ಖಂಡ್ರೆ, ಎಸ್ಸೆಸ್ ಅವರ ಪುತ್ರ ಎಸ್.ಎಸ್. ಗಣೇಶ್, ಈಶ್ವರೀಯ ವಿವಿ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲೀಲಾಜಿ ಸೇರಿದಂತೆ, ಸ್ಥಳೀಯ ರಾಜಕೀಯ ಮುಖಂಡರು, ಅಧಿಕಾರಿಗಳೊಂದಿಗೆ ಎಸ್ಸೆಸ್ ಕೇಕ್ ಕತ್ತರಿಸಿದರು. ಈ ವೇಳೆ ಮಾತನಾಡಿದ ಶಿವಶಂಕರಪ್ಪ ಅವರು, ನೆರೆದಿದ್ದವರ ಅಭಿಮಾನಕ್ಕೆ ವಂದಿಸಿ ದರು. ನಿಮ್ಮೆಲ್ಲರ ಹಾರೈಕೆಯಿಂದ ಮತ್ತಷ್ಟು ಉತ್ತಮ ಕೆಲಸಗಳನ್ನು ಮಾಡುವುದಾಗಿ ಹೇಳಿದರು.

## ರಾಣೇಬೆನ್ನೂರು ತಾ.ಗ್ರಾ.ಪಂ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ಪ್ರಕಟ

ರಾಣೇಬೆನ್ನೂರು, ಜೂ.16- ಹಾವೇರಿ ಜಿಲ್ಲಾ ಚುನಾವಣಾಧಿಕಾರಿಯಾದ ಜಿಲ್ಲಾಧಿಕಾರಿಗಳು ರಾಣೇಬೆನ್ನೂರು ತಾಲ್ಲೂಕಿನ 40 ಗ್ರಾಮ ಪಂಚಾಯ್ತಿಗಳ 2ನೇ ಹಂತದ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ಪಟ್ಟಿಯನ್ನು ಪ್ರಕಟಿಸಿದ್ದಾರೆ.

| ಗ್ರಾ.ಪಂ. | ಅಧ್ಯಕ್ಷ | ಉಪಾಧ್ಯಕ್ಷ |
|---|---|---|
| ಗುಡಗೂರು | ಅ ಮಹಿಳೆ | ಸಾಮಾನ್ಯ |
| ಬೇಲೂರು | ಸಾ ಮಹಿಳೆ | ಎಸ್ಸಿ |
| ಮೆಡ್ಲೇರಿ | ಸಾ ಮಹಿಳೆ | ಎಸ್ಸಿ |
| ಹರನಗಿರಿ | ಎಸ್ಸಿ ಮಹಿಳೆ | ಸಾಮಾನ್ಯ |
| ಹಲಗೇರಿ | ಸಾ ಮಹಿಳೆ | ಅ ವರ್ಗ |
| ಲಿಂಗದಹಳ್ಳಿ | ಸಾ ಮಹಿಳೆ | ಸಾಮಾನ್ಯ |
| ಬೆನಕನಕೊಂಡ | ಎಸ್ಸಿ | ಸಾ ಮಹಿಳೆ |
| ಅರೆಮಲ್ಲಾಪೂರ | ಸಾಮಾನ್ಯ | ಅ ಮಹಿಳೆ |
| ಹಿರೇಬಿದರಿ | ಸಾಮಾನ್ಯ | ಸಾ ಮಹಿಳೆ |
| ಐರಣಿ | ಸಾ ಮಹಿಳೆ | ಎಸ್ಸಿ |
| ಕೋಡಿಯಾಲ | ಸಾ ಮಹಿಳೆ | ಬ ವರ್ಗ |
| ಮಾಕನೂರು | ಸಾಮಾನ್ಯ | ಎಸ್ಸಿ ಮಹಿಳೆ |
| ಮುದೇನೂರು | ಸಾ ಮಹಿಳೆ | ಅ ವರ್ಗ |
